ಸಂಪುಟ : 9 ಸಂಚಿಕೆ 215 ಪುಟ : 4 ಬೆಲೆ: 3.00 ಗುರುವಾರ ಅಕ್ಟೋಬರ್ 3 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 215 Pages : 4 Price : 3.00 Thursday October 3 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ಜಿಲ್ಲೆಗೆ ಕೇಂದ್ರ ಸಚಿವ ವಿ. ಸೋಮಣ್ಣ



■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆಗಳ ರಾಜ್ಯ ಸಚಿವರಾದ ವಿ.ಸೋಮಣ್ಣ ಅವರು ಅಕ್ಟೋಬರ್ 3 ರಂದು ಸಂಜೆ 6.45 ಗಂಟೆಗೆ ಹುಬ್ಬಳ್ಳಿಯಿಂದ ಗದಗ ಜಿಲ್ಲೆಯ ರೋಣ ತಾಲೂಕಿಗೆ ಆಗಮಿಸುವರು. ರೋಣ ತಾಲೂಕಿನ ಅಬ್ಬಿಗೇರಿಯಲ್ಲಿ ಶ್ರೀ ಅನ್ನದಾನೇಶ್ವರ ಹೈಸ್ಕೂಲ್‌ದಲ್ಲಿ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಲ್ಲಿ ಪಾಲ್ಗೊಳ್ಳುವರು. ರಾತ್ರಿ 9 ಗಂಟೆಗೆ ಗದಗಿನಿಂದ ಹುಬ್ಬಳ್ಳಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಬಿಪಿಎಲ್ ಪಡಿತರ ಚೀಟಿ ಅ.10 ರವರೆಗೆ ಕಾಲಾವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ಅರ್ಹ ಬಿಪಿಎಲ್ ಪಡಿತರ ಚೀಟಿದಾರರಿಗೆ ಪಡಿತರ ಚೀಟಿ ಮಂಜೂರು ಮಾಡಲು ಆಯಾ ತಾಲೂಕು ಆಹಾರ ನಿರೀಕ್ಷಕರಿಗೆ ಅಕ್ಟೋಬರ್ 10 ರವರೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಾಂಧಿ ಜಯಂತಿ : ಶ್ರಮದಾನ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ಬುಧವಾರ ಮಹಾತ್ಮ ಗಾಂಧೀಜಿ ಜಯಂತಿ ಹಿನ್ನೆಲೆಯಲ್ಲಿ ಮಹಾತ್ಮ ಗಾಂಧಿ ವೃತ್ತದ ಸಮೀಪ ಸ್ವಚ್ಛತಾ ಹೀ ಸೇವಾ ಶ್ರಮದಾನ ಕಾರ್ಯಕ್ರಮ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಶಾಸಕರಾದ ಎಸ್ ವಿ ಸಂಕನೂರ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಸಿ ಇ ಒ ಭರತ್ ಎಸ್, ರೆಡ್ ಕ್ರಾಸ್ ಸಂಸ್ಥೆ, ಎನ್.ಸಿ.ಸಿ ವಿದ್ಯಾರ್ಥಿಗಳು, ನಗರಸಭೆಯ ಸದಸ್ಯರು, ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.



ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಬುಧವಾರ ಜಿಲ್ಲಾಡಳಿತ ಭವನದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜನ್ಮದಿನಾಚರಣೆ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಸುಮನ್ ಕುಲಕರ್ಣಿ-ಭಗವದ್ಗೀತೆ, ಕುಮಾರಿ ವೈನಾ ಮಕಾನದಾರ-ಕುರಾನ್, ಅಲ್ವಿದಾ ದಲಭಂಜನ-ಬೈಬಲ್ ಪಠಿಸುವುದರ ಮೂಲಕ ಸರ್ವಧರ್ಮ ಪ್ರಾರ್ಥನೆ ಪ್ರಸ್ತುತಪಡಿಸಿದರು.

### ಜಿಲ್ಲಾಡಳಿತ ಭವನದಲ್ಲಿ ಮಹಾತ್ಮ ಗಾಂಧೀಜಿಯವರ 155ನೇ ಜನ್ಮದಿನಾಚರಣೆ ಕಾರ್ಯಕ್ರಮ

# ಗಾಂಧೀಜಿಯವರ ನೈತಿಕ ಮೌಲ್ಯಗಳನ್ನು ಅಳವಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಗತ್ತು ಕಂಡ ಮಹಾನ್ ನಾಯಕರಾದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್‌ಬಹದ್ದೂರ ಶಾಸ್ತ್ರೀಜಿಯವರು ದೇಶಕ್ಕೆ ನೀಡಿದ ಕೊಡುಗೆ ಅವಿಸ್ಮರಣೀಯವಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅಭಿಪ್ರಯಪಟ್ಟರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಬುಧವಾರ ಜಿಲ್ಲಾಡಳಿತ ಭವನದಲ್ಲಿ ಜರುಗಿದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜನ್ಮದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶ್ರಮ ಇಲ್ಲದ ಸಂಪತ್ತು, ಪ್ರಜ್ಞೆ ಇಲ್ಲದ ಸಂತೋಷ, ತತ್ವವಿಲ್ಲದ ರಾಜಕೀಯ, ಬುಡ ಇಲ್ಲದ ಶಿಕ್ಷಣ,

> ಮಹಾತ್ಮ ಗಾಂಧೀಜಿಯವರು ಸತ್ಯ, ಅಹಿಂಸೆ ಹಾಗೂ ಪ್ರೇಮ ಎಂಬ ಮೂರು ಅಸ್ತ್ರಗಳಿಂದ ಹೋರಾಡಿ ನಮ್ಮ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟರು. ತಮ್ಮ ಇಡೀ ಜೀವನವನ್ನು ದೇಶದ ಸ್ವಾತಂತ್ರ್ಯಕ್ಕಾಗಿ ಹಾಗೂ ಸಮಾಜದ ಅಭಿವೃದ್ಧಿಗಾಗಿ ಮುಡಿಪಿಟ್ಟ ಮಹಾತ್ಮರು. ಯಾವುದೇ ಆಸೆ-ಆಕಾಂಕ್ಷೆಗಳನ್ನು ಹೊಂದದೇ ತಮ್ಮನ್ನು ತಾವು ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಂಡರು. ಸ್ವಾತಂತ್ರ್ಯಾನಂತರ ಈ ದೇಶವನ್ನು ಸುಂದರ ರಾಷ್ಟ್ರವನ್ನಾಗಿ ಮಾಡಲು ಶ್ರಮಿಸಿದರು.
>
> **– ಎಸ್.ವಿ. ಸಂಕನೂರು.**
> **ವಿಧಾನ ಪರಿಷತ್ ಸದಸ್ಯರು.**



ನೀತಿ ಇಲ್ಲದ ವ್ಯಾಪಾರ ಮಾನವೀಯತೆ ಇಲ್ಲದ ವಿಜ್ಞಾನ, ತ್ಯಾಗ ಇಲ್ಲದ ಪೂಜೆ ಇವೆಲ್ಲವೂ ನಿರರ್ಥಕ. ಗಾಂಧೀಜಿಯವರ ನೈತಿಕ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕಾದ ಅಗತ್ಯತೆ ಇದೆ ಎಂದು ಸಲಹೆ ನೀಡಿದರು. ಮಾಜಿ ಪ್ರಧಾನಿ ಲಾಲ್‌ಬಹದ್ದೂರ ಶಾಸ್ತ್ರಿಯವರು ಸರಳ ಜೀವಿಗಳು. ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಜೀವನವನ್ನು ಸಮರ್ಪಿಸಿಕೊಂಡವರು. ಜೈ ಜವಾನ್ ಜೈ ಕಿಸಾನ್ ಎನ್ನುವ ಸಂದೇಶದಿಂದ ದೇಶಕ್ಕೆ ಸೈನಿಕರ ಮತ್ತು ರೈತರ ಮಹತ್ವ ಬಹಳಷ್ಟಿದೆ ಎಂದು ಸಾರಿದರು. ಈಗಿನ ವಿದ್ಯಾರ್ಥಿಗಳು ಮಹಾತ್ಮ ಗಾಂಧಿ ಮತ್ತು ಲಾಲ್ ಬಹದ್ದೂರ ಶಾಸ್ತ್ರಿ ಕುರಿತು ಅಧ್ಯಯನ ಮಾಡಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಸ್ವಚ್ಛತೆಯ ಪ್ರತಿಜ್ಞಾ ವಿಧಿ ಬೋಧಿಸಿದರು. ಇದೇ ಸಂದರ್ಭದಲ್ಲಿ ಸುಮನ್ ಕುಲಕರ್ಣಿ-ಭಗವದ್ಗೀತೆ, ಕುಮಾರಿ ವೈನಾ ಮಕಾನದಾರ - ಕುರಾನ್, ಅಲ್ವಿದಾ ದಲಭಂಜನ-ಬೈಬಲ್ ಪಠಿಸುವುದರ ಮೂಲಕ ಸರ್ವಧರ್ಮ ಪ್ರಾರ್ಥನೆ ಪ್ರಸ್ತುತಪಡಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ಮಹೇಶ ಪೋತದಾರ, ತಹಸೀಲ್ದಾರರಾದ ಶ್ರೀನಿವಾಸ ಕುಲಕರ್ಣಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ರವಿ ಗುಂಜೀಕರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳು ಹಾಜರಿದ್ದರು.

ವೆಂಕಟೇಶ ಅಲ್ಕೋಡ ಗಾಂಧೀಜಿಯ ಪ್ರಿಯ ಭಜನೆಗಳನ್ನು ಪ್ರಸ್ತುತಪಡಿಸಿದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

> ಉಪನ್ಯಾಸಕರಾಗಿ ಆಗಮಿಸಿದ ಸಾಹಿತಿ ಐ.ಕೆ. ಕಮ್ಮಾರ ಮಾತನಾಡಿ, ಮಹಾತ್ಮ ಗಾಂಧೀಜಿ ಹಾಗೂ ಲಾಲ್‌ಬಹದ್ದೂರ ಶಾಸ್ತ್ರೀಯವರ ಜೀವನಕ್ಕೂ ಹಾಗೂ ಜನಸಾಮಾನ್ಯರ ವಾಸ್ತವ ಜೀವನಕ್ಕೂ ಅವಲೋಕನ ಮಾಡಬೇಕಾದ ಅಗತ್ಯತೆ ಇದೆ. ಮನುಷ್ಯನ ವಿಚಾರಧಾರೆಗೂ ನಿಲುಕಲಾರದ ಅನೇಕ ಸಾಧನೆಗಳನ್ನು ಈ ಮಹಾನ್ ವ್ಯಕ್ತಿಗಳು ಮಾಡಿದ್ದಾರೆ. ಬ್ರಿಟೀಷರ ಸಂಕೋಲೆಯಿಂದ ನಮ್ಮ ದೇಶಕ್ಕೆ ಸ್ವಾತಂತ್ರ್ಯ ದೊರಕಿಸಿಕೊಟ್ಟರು. ಅನೇಕರ ತ್ಯಾಗ, ಬಲಿದಾನದಿಂದ ದೊರಕಿದ ಸ್ವಾತಂತ್ರ್ಯವನ್ನು ಸದುಪಯೋಗಪಡಿಸಿಕೊಳ್ಳುವ ಮೂಲಕ ಈಗಿನ ಯುವಕರು ಅರ್ಥಪೂರ್ಣ ಜೀವನಶೈಲಿ ಅಳವಡಿಸಿಕೊಳ್ಳಬೇಕು. ಅಂದಾಗ ಮಾತ್ರ ನಮ್ಮ ದೇಶದ ಋಣ ತೀರಿಸಿದಂತಾಗುತ್ತದೆ ಎಂದರು.




### ‘ಗಾಂಧಿ ನಡಿಗೆ’ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಶಾಸಕ ಜಿ.ಎಸ್. ಪಾಟೀಲ

# ದೊಡ್ಡಮೇಟಿ ಸ್ಮಾರಕ ಭವನ ಶೀಘ್ರವೇ ನಿರ್ಮಾಣ

■ವಿಜಯಸಾಕ್ಷಿ ಸುದ್ದಿ, ರೋಣ

ನಾಡು ಕಂಡ ಅಪ್ರತಿಮ ದೇಶ ಪ್ರೇಮಿ ದಿ.ಅಂದಾನಪ್ಪ ದೊಡ್ಡಮೇಟಿಯವರ ಸ್ಮಾರಕ ಭವನವನ್ನು 10 ಕೋಟಿ ರೂಗಳ ವೆಚ್ಚದಲ್ಲಿ ನಿರ್ಮಿಸುತ್ತಿದ್ದು, ಈಗಾಗಲೇ ಆಡಳಿತಾತ್ಮಕ ಮಂಜೂರಾತಿ ಪಡೆಯಲಾಗಿದೆ ಎಂದು ಖನಿಜ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಬುಧವಾರ ಜಕ್ಕಲಿ ಹಾಗೂ ಬೂದಿಹಾಳ ಗ್ರಾಮದಲ್ಲಿ ಜರುಗಿದ ರಾಷ್ಟ್ರಪಿತ ಮಹಾತ್ಮ ಗಾಂಧಿಯವರ 155ನೇ ಜಯಂತ್ಯುತ್ಸವದ ನಿಮಿತ್ತ ಜರುಗಿದ ‘ಗಾಂಧಿ ನಡಿಗೆ’ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ದಿ.ಅಂದಾನಪ್ಪ ದೊಡ್ಡಮೇಟಿಯವರು ನಾಡಿಗೆ ಹಾಗೂ ದೇಶಕ್ಕೆ ತಮ್ಮದೇ ಆದ ಕೊಡುಗೆಯನ್ನು ನೀಡಿದ್ದಾರೆ. ಇಂತಹ ಮಹನೀಯರ ಸಾಧನೆ ಹಾಗೂ ದೇಶಪ್ರೇಮ ಮುಂದಿನ ಪೀಳಿಗೆಗೆ ಪಸರಿಸಬೇಕು ಎಂಬ ದೃಷ್ಟಿಯಿಂದ ಗ್ರಾಮದಲ್ಲಿ ಸ್ಮಾರಕ ಭವನವನ್ನು



ನಿರ್ಮಿಸಲು ಉದ್ದೇಶಿಸಲಾಗಿದೆ. ಶೀಘ್ರವೇ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದರು.

ಅಧ್ಯಕ್ಷತೆಯನ್ನು ವೀರಣ್ಣ ಶೆಟ್ಟರ ವಹಿಸಿದ್ದರು. ಬೂದಿಹಾಳ ಗ್ರಾಮದಿಂದ ಜರುಗಿದ ಗಾಂಧಿ ನಡಿಗೆಯಲ್ಲಿ ಗಾಂಧಿ ವೇಷಧಾರಿ ಮುತ್ತಣ್ಣ ತಿರ್ಲಾಪೂರ ಭಾಗಿಯಾಗುವ ಮೂಲಕ 1.5 ಕಿಮೀ ಕಾಲ್ನಡಿಗೆಗೆ ವಿಶೇಷ ಮೆರುಗು ನೀಡಿದರು. ಬೂದಿಹಾಳ ಗ್ರಾಮದಿಂದ ಜರುಗಿದ ಪಾದಯಾತ್ರೆಯಲ್ಲಿ ಸಾವಿರಾರು ಜನರು ಭಾಗಿಯಾದರು. ಮಾರ್ಗ ಮಧ್ಯದಲ್ಲಿ ದಿ.ಅಂದಾನಪ್ಪ ದೊಡ್ಡಮೇಟಿಯವರ ಸಮಾಧಿ ಸ್ಥಳಕ್ಕೆ ಭೇಟಿ ನೀಡುವ ಮೂಲಕ ಗೌರವ ಸಲ್ಲಿಸಲಾಯಿತು. ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ಶಾಸಕ ಜಿ.ಎಸ್. ಪಾಟೀಲ ನಮನ ಸಲ್ಲಿಸಿದರು. ಇದೇ ಸಂಧರ್ಭದಲ್ಲಿ ಮಾರನಬಸರಿ ಗ್ರಾ.ಪಂ ಪೌರ ಕಾರ್ಮಿಕರನ್ನು ಶಾಸಕರು ಸನ್ಮಾನಿಸಿದರು. ಐ.ಎಸ್. ಪಾಟೀಲ, ಸಂಗನಗೌಡ ಪಾಟೀಲ, ಅಕ್ಷಯ ಪಾಟೀಲ, ಸಂದೇಶ ದೊಡ್ಡಮೇಟಿ, ಎಸ್. ಎಚ್. ಸೋಂಪುರ, ಮುತ್ತು ಮೇಟಿ, ರಾಜು ಮುಗುಳಿ, ಅಂದಪ್ಪ ಬಿಚ್ಚೂರ, ಯಲ್ಲಪ್ಪಗೌಡ್ರ, ಗೀತಾ ಮಾಡಲಗೇರಿ, ದುರ್ಗಪ್ಪ ಹಿರೇಮನಿ, ಯೂಸುಫ್ ಇಟಗಿ, ಮುತ್ತಣ್ಣ ಸಂಗಳದ, ಸಂಗು ನವಲಗುಂದ, ಮಲಿಕ ಕುರ್ತುಕೋಟಿ, ಸಂಜಯ ದೊಡ್ಡಮನಿ, ಮೌನೇಶ ಹಾದಿಮನಿ, ಶಿವು ಹುಲ್ಲೂರ, ಮಂಜುಳಾ ಹುಲ್ಲಣ್ಣವರ, ನಾಜಬೇಗಂ ಯಲಿಗಾರ, ಖಾಧಿರಸಾಬ ಸಂಕನೂರ, ಮಲ್ಲು ರಾಯನಗೌಡ್ರ, ವಿನಾಯಕ ಜಕ್ಕಣಗೌಡ್ರ, ಮಂಜುನಾಥ ಪೂಜಾರ ಸೇರಿದಂತೆ ರೋಣ, ಜಕ್ಕಲಿ, ನರೆಗಲ್ಲ, ಗಜೇಂದ್ರಗಡ, ಮಾರನಬಸರಿ, ನಡಗುಂದಿ,ಬೂದಿಹಾಳ, ಅಬ್ಬಿಗೇರಿ ಗ್ರಾಮಗಳ ಮುಖಂಡರು ಹಾಗೂ ನಾಗರಿಕರು ಪಾಲ್ಗೊಂಡಿದ್ದರು.

> ರಾಷ್ಟ್ರಪಿತ ಮಹಾತ್ಮ ಗಾಂಧಿಯವರು ಜಕ್ಕಲಿ ಗ್ರಾಮಕ್ಕೆ ಆಗಮಿಸಿದ್ದು ಇತಿಹಾಸವಾಗಿದೆ. ತಾಲೂಕು ಸೇರಿದಂತೆ ಜಿಲ್ಲೆಯಲ್ಲಿ ಅನೇಕ ಮಹನೀಯರು ನಾಡು-ನುಡಿಯ ಪ್ರೇಮವನ್ನು ಮೆರೆದಿದ್ದಾರೆ. ಅವರನ್ನು ಸ್ಮರಿಸುವುದು ನಮ್ಮ ಆದ್ಯ ಕರ್ತವ್ಯವಾಗಿದೆ ಎಂದ ಅವರು, ನಾಗರಿಕ ಸಮುದಾಯ ಸ್ವಚ್ಛತೆಯ ಬಗ್ಗೆ ಹೆಚ್ಚು ಗಮನಹರಿಸಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

### ರಾಜೀನಾಮೆ ನೀಡುವವರೆಗೂ ನಿರಂತರ ಹೋರಾಟ : ಗುಳಗಣ್ಣನವರ

# ಸಿಎಂ ಕುರ್ಚಿಗೆ ಸಿದ್ದರಾಮಯ್ಯ ಅಂಟಿಕೊಂಡಿರುವುದು ಸರಿಯಲ್ಲ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟಿರುವುದು ಸರಿಯಾಗಿದೆ. ಅಲ್ಲದೇ ನ್ಯಾಯಾಲಯವು ಸಹ ಸಿಎಂ ಅರ್ಜಿಯನ್ನು ತಳ್ಳಿ ಹಾಕಿದೆ, ಸಿಎಂ ಸಿದ್ದರಾಮಯ್ಯನವರು ಕುರ್ಚಿಗೆ ಅಂಟಿಕೊಂಡಿರುವುದು ಸರಿಯಲ್ಲ ಕೂಡಲೇ ರಾಜೀನಾಮೆ ನೀಡಬೇಕು, ರಾಜೀನಾಮೆ ನೀಡುವವರೆಗೂ ನಿರಂತರ ಹೋರಾಟ ಮಾಡುವುದಾಗಿ ಬಿಜೆಪಿ ಜಿಲ್ಲಾಧ್ಯಕ್ಷ ನವೀನ್ ಗುಳಗಣ್ಣನವರ್ ಹೇಳಿದರು.

ನಗರದ ಕೆಯೂಡಬ್ಲ್ಯೂಜೆ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸಿದ್ದರಾಮಯ್ಯನವರು ಕುರ್ಚಿಗೆ ಅಂಟಿಕೊಂಡು ಕುಳಿತಿರುವುದು ಸರಿಯಲ್ಲ, ರಾಜ್ಯದ



ರಾಜ್ಯಪಾಲರು ಪ್ರಾಸಿಕ್ಯೂಷನ್ ಗೆ ಅನುಮತಿ ಕೊಟ್ಟ ಬಳಿಕವೂ ಮುಖ್ಯಮಂತ್ರಿ ಹುದ್ದೆಯಲ್ಲಿ ಮುಂದುವರಿಯುವುದು ಸರಿಯಲ್ಲ, ಸಿದ್ದರಾಮಯ್ಯ ಮೊಂಡುತನ ಬಿಟ್ಟು ರಾಜೀನಾಮೆ ನೀಡಲಿ ಎಂದರು.

ವಾಲ್ಮೀಕಿ ನಿಗಮದ 187 ಕೋಟಿ ರೂಪಾಯಿ ಹಗರಣವೂ ಸೇರಿದಂತೆ ಪರಿಶಿಷ್ಟ ಸಮುದಾಯಕ್ಕೆ ಸಂಬಂಧಿಸಿದ ಅನುದಾನ ಹೆಚ್ಚು ದುರ್ಬಳಕೆ ಮಾಡಿಕೊಂಡಿದೆ, ಮೂಡಾ ಹಗರಣವು ತಮ್ಮ ಅವಧಿಯಲ್ಲಿ ನಡೆದಿದೆ, ದಲಿತರ ಜಾಗ ಕಬಳಿಸಿ 14 ನಿವೇಶನ ಪಡೆದಿರುವುದು ಅಕ್ರಮಕ್ಕೆ ಸಾಕ್ಷಿಯಾಗಿದೆ ಕೂಡಲೆ ರಾಜೀನಾಮೆ ನೀಡಲಿ ಎಂದರು.

ವಿಧಾನಸಭೆಯ ವಿರೋಧ ಪಕ್ಷದ ಮುಖ್ಯಸಚೇತಕ ದೊಡ್ಡನಗೌಡ ಪಾಟೀಲ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಸ್ಥಾನಕ್ಕೆ ಕೂಡಲೇ ರಾಜೀನಾಮೆ ನೀಡಬೇಕು, ನೈತಿಕವಾಗಿ ಮುಖ್ಯಮಂತ್ರಿಯಾಗಿ ಮುಂದುವರಿಯಲು ಅರ್ಹರಿಲ್ಲ. ಹಿಂದೆ ಬಿಎಸ್‌ವೈ ವಿರುದ್ಧ ಆರೋಪ ಕೇಳಿ ಬಂದಾಗ ರಾಜೀನಾಮೆ ಕೊಟ್ಟಿದ್ದರು.ಈಗ ಸಿದ್ದರಾಮಯ್ಯ ರಾಜೀನಾಮೆ ಎಂದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಪಕ್ಷದ ರಾಜ್ಯ ಕಾರ್ಯಕಾರಿಣಿ ಸದಸ್ಯ ಡಾ. ಬಸವರಾಜ್ ಕ್ಯಾವಟರ್, ಜಿಲ್ಲಾ ವಕ್ತಾರ ಸೋಮಶೇಖರ, ಜಿಲ್ಲಾ ಮಾಧ್ಯಮ ಸಂಚಾಲಕ ಮಹೇಶ ಹಾದಿಮನಿ ಇದ್ದರು.

### ಅಕ್ಟೋಬರ್ 2ರಿಂದ ಒಂದು ತಿಂಗಳ ಕಾಲ ಜಿಲ್ಲೆಯಾದ್ಯಂತ ಅಭಿಯಾನ

# ಉದ್ಯೋಗ ಖಾತರಿ ನಡಿಗೆ ಸಬಲತೆಯೆಡೆಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಕ್ಟೋಬರ್ 2ರಿಂದ ಒಂದು ತಿಂಗಳ ಕಾಲ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ‘ಉದ್ಯೋಗ ಖಾತರಿ ನಡಿಗೆ ಸಬಲತೆಯೆಡೆಗೆ’ ಅಭಿಯಾನದಲ್ಲಿ ಕಾಮಗಾರಿಗಳ ಬೇಡಿಕೆ ಪಡೆಯಲು ವೇದಿಕೆ ಕಲ್ಪಿಸುವಂತ ವಿಶೇಷ ಚಟುವಟಿಕೆಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಸಿಇಓ ಭರತ್ ಎಸ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಗ್ರಾ.ಪಂ ವ್ಯಾಪ್ತಿಯ ಎಲ್ಲಾ ಗ್ರಾಮಗಳ ಪ್ರತಿ ಮನೆಗೆ ಭೇಟಿ ನೀಡಿ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಕುರಿತು ಜಾಗೃತಿ ಮೂಡಿಸಿ ಬೇಡಿಕೆ ಸ್ವೀಕರಿಸಲಾಗುವುದು. ಕಾಮಗಾರಿಗಳ ಬೇಡಿಕೆಯ ಅರ್ಜಿಗಳನ್ನು ಸ್ವೀಕರಿಸಲು



ಜಾಗೃತಿ ವಾಹನದಲ್ಲಿ ಯೋಜನೆಯ ಸಮಗ್ರ ಮಾಹಿತಿ ಒಳಗೊಂಡ ಜಿಂಗಲ್ಸ್‌ಗಳಿಂದ ಅರಿವು ಮೂಡಿಸಿ ಕ್ರಿಯಾ ಯೋಜನೆ ಸಿದ್ಧಪಡಿಸುವಲ್ಲಿ ಸಾರ್ವಜನಿಕರ ಪಾಲ್ಗೊಳ್ಳುವಿಕೆ ಬಗ್ಗೆ ತಿಳಿಸಲಾಗುತ್ತಿದ್ದು, ಈ ಮೂಲಕ ಗ್ರಾಮದ ರೈತರಿಂದ ವೈಯಕ್ತಿಕ ಬೇಡಿಕೆಗಳನ್ನು ಸಂಗ್ರಹಿಸಲು ಬೇಡಿಕೆ ಪೆಟ್ಟಿಗೆಯನ್ನು ಗ್ರಾಮ ಪಂಚಾಯಿತಿಯಲ್ಲಿಟ್ಟು ಪ್ರತಿದಿನ ಸ್ವೀಕೃತವಾದ ಬೇಡಿಕೆಗಳನ್ನು ಪರಿಶೀಲಿಸಿ ಕಾಮಗಾರಿಗಳ ಪಟ್ಟಿಗೆ ಸೇರ್ಪಡೆ ಮಾಡಲು ನಿರ್ದೇಶನ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಆಂಬುಂಕ್ತಾಲಂಬುಂದ ನಿರ್ದೇಶನದಂತೆ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯ 2025-26ನೇ ಸಾಲಿನ ಕಾರ್ಮಿಕ ಆಯವ್ಯಯ ತಯಾರಿಸಲು ವೇಳಾಪಟ್ಟಿಯಂತೆ ಕಾಲಮಿತಿಯೊಳಗೆ ಸದರಿ ಪಕ್ರಿಯೆಯನ್ನು ಪೂರ್ಣಗೊಳಿಸುವಂತೆ ಎಲ್ಲಾ ಗ್ರಾ.ಪಂಗಳಿಗೆ ಸೂಚಿಸಿದೆ.

> **ಯೋಜನೆಯ ಪ್ರಮುಖಾಂಶಗಳು**
>
> ಪ್ರತಿ ಕುಟುಂಬಕ್ಕೆ 100 ದಿನಗಳ ಕೆಲಸ ಖಾತರಿ, ಗಂಡು ಹೆಣ್ಣಿಗೆ ಸಮಾನ ಕೂಲಿಯಾಗಿ ಪ್ರತಿ ದಿನಕ್ಕೆ 349 ರೂ. ಪಾವತಿ, ಕಾಮಗಾರಿ ಪ್ರಮಾಣದಲ್ಲಿ ಹಿರಿಯ ನಾಗರಿಕರಿಗೆ ಮತ್ತು ವಿಶೇಷ ಚೇತನರಿಗೆ ಶೇ.50ರಷ್ಟು ರಿಯಾಯಿತಿ, ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಗೆ ನಿರ್ವಹಿಸುವ ಕೆಲಸಕ್ಕೆ ಅಥವಾ ಕೂಲಿ ಕಾರ್ಮಿಕರಿಗೆ ಹೆಚ್ಚುವರಿಯಾಗಿ ಶೇ.10ರಷ್ಟು ರಿಯಾಯತಿ, ಮಹಾತ್ಮ ಗಾಂಧಿ ನರೇಗಾದಡಿ ನೋಂದಾಯಿತ ಕುಟುಂಬವು ತಮ್ಮ ಜೀವಿತಾವಧಿಯಲ್ಲಿ 5 ಲಕ್ಷ ರೂಗಳ ಮಿತಿಯೊಳಗೆ ಬೇಕಾದ ವೈಯಕ್ತಿಕ ಕಾಮಗಾರಿಗಳನ್ನು ಪಡೆದುಕೊಳ್ಳಲು ಅರ್ಹರಾಗಿರುತ್ತಾರೆ ಎಂದು ಜಿ.ಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ತಿಳಿಸಿ, ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದ್ದಾರೆ.

## ಸಂಪಾದಕೀಯ

# ಅಮೆರಿಕಾ ಪ್ರವೇಶದಿಂದ ಯುದ್ಧ ಮತ್ತಷ್ಟು ಭೀಕರ

ಇಸ್ರೇಲ್ ವಾಯುಪಡೆ ಹಿಜ್ಬುಲ್ಲಾ ಮುಖ್ಯಸ್ಥನನ್ನು ಹೊಡೆದುರುಳಿಸಿದ ಬಳಿಕ ಇರಾನ್ ಮತ್ತು ಇಸ್ರೇಲ್ ಮಧ್ಯೆ ಯುದ್ಧ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ. ಈ ಎರಡೂ ರಾಷ್ಟ್ರಗಳ ನಡುವಿನ ಕದನ ಅಂತಾರಾಷ್ಟ್ರೀಯ ವಿದ್ಯಮಾನಗಳು, ವ್ಯವಹಾರದ ಮೇಲೆ ಪರಿಣಾಮ ಉಂಟುಮಾಡಲು ಆರಂಭಿಸಿದೆ.

ಇಸ್ರೇಲ್ ಮತ್ತು ಇರಾನ್ ಮಧ್ಯೆ ಯುದ್ಧ ನಡೆಯುವುದು ಹೊಸದೇನಲ್ಲ. ಆದರೆ ಈ ಎರಡು ರಾಷ್ಟ್ರಗಳ ಮಧ್ಯದ ಯುದ್ಧ ಮಧ್ಯಪ್ರಾಚ್ಯ ರಾಷ್ಟ್ರಗಳ ಮೇಲೆ ಗಂಭೀರ ಪರಿಣಾಮ ಉಂಟು ಮಾಡಲಿದೆ.

ಇರಾನ್ ದಾಳಿಗೆ ಇಸ್ರೇಲ್ ತೀಕ್ಷ್ಣವಾಗಿಯೇ ತಿರುಗೇಟು ನೀಡುತ್ತಿದೆ. ಇದು ಯುದ್ಧ ಮತ್ತಷ್ಟು ವಿಸ್ತಾರ ಮತ್ತು ಭೀಕರವಾಗಿ ನಡೆಯುವುದಕ್ಕೆ ಮುನ್ನುಡಿ ಬರೆದಿದೆ. ಆದರೆ ಈ ಎರಡು ರಾಷ್ಟ್ರಗಳ ನಡುವಿನ ಯುದ್ಧದಲ್ಲಿ ಅಮೆರಿಕಾ ಮಧ್ಯಪ್ರವೇಶ ಮಾಡುವ ಸೂಚನೆ ನೀಡಿರುವುದು, 3ನೇ ಮಹಾಯುದ್ಧಕ್ಕೆ ಮುನ್ಸೂಚನೆ ಎನ್ನುವಂತಾಗಿದೆ.

ಅಮೆರಿಕಾ ಮತ್ತು ಇಸ್ರೇಲ್ ಮಧ್ಯೆ ಒಳ್ಳೆಯ ಸ್ನೇಹ ಸಂಬಂಧ ಇದೆ. ತನ್ನ ಮಿತ್ರ ರಾಷ್ಟ್ರ ಸಂಕಷ್ಟದಲ್ಲಿದ್ದಾಗ ನೆರವಿನ ಹಸ್ತ ಚಾಚುವುದು ಸಹಜ. ಆದರೆ ಅಮೆರಿಕಾ ನೆರವು ನೀಡುವ ಭಾಗವಾಗಿ ಯುದ್ಧದಲ್ಲಿ ಭಾಗಿಯಾದರೆ ಇರಾನ್ ಸಹ ತನ್ನ ನೆರೆಯ ರಾಷ್ಟ್ರದ ನೆರವು ಪಡೆದುಕೊಳ್ಳಲಿದೆ.

ಸದ್ಯ ಇರಾನ್ ಏಕಾಂಗಿಯಾಗಿ ದಾಳಿ ನಡೆಸುತ್ತಿದೆ. ಆದರೆ ಒಂದು ವೇಳೆ ಇಸ್ರೇಲ್ ಪರ ಅಮೆರಿಕಾ ಯುದ್ಧಕ್ಕೆ ಧುಮುಕಿದರೆ, ಇರಾನ್ ಪರ ರಷ್ಯಾ ಯುದ್ಧಕ್ಕೆ ಪಾದಾರ್ಪಣೆ ಮಾಡಲಿದೆ. ಜಗತ್ತಿನಲ್ಲಿಯೇ ಅತ್ಯಂತ ಬಲಿಷ್ಠ ರಾಷ್ಟ್ರಗಳು ಎನಿಸಿರುವ ಅಮೆರಿಕಾ ಮತ್ತು ರಷ್ಯಾ ಯುದ್ಧಕ್ಕೆ ಧುಮುಕಿದರೆ 3ನೇ ಮಹಾಯುದ್ಧ ನಡೆಯುವುದರಲ್ಲಿ ಅನುಮಾನವಿಲ್ಲ.

ಸದ್ಯ ಅಮೆರಿಕಾ ಇಸ್ರೇಲ್ ಬೆಂಬಲಿಸಿ, ಮಿಲಿಟರಿ ನೆರವು ನೀಡುವ ಭರವಸೆ ನೀಡಿದೆ. ಮತ್ತು ಇರಾನ್ ಕ್ಷಿಪಣಿಗಳನ್ನು ಹೊಡೆದುರುಳಿಸಲು ಅಮೆರಿಕಾ ಅಧ್ಯಕ್ಷರು ಸೇನೆಗೆ ನಿರ್ದೇಶನ ನೀಡಿದ್ದಾರೆ. ಅಮೆರಿಕಾದ ಈ ನಡೆಯನ್ನು ಇರಾನ್ ಖಂಡಿಸಿ, ನಮ್ಮಿಬ್ಬರ ಯುದ್ಧದಿಂದ ದೂರ ಉಳಿದರೆ ಒಳಿತು ಎನ್ನುವ ಎಚ್ಚರಿಕೆ ನೀಡಿದೆ.

ಒಟ್ಟಾರೆ ಜಗತ್ತಿನಲ್ಲಿ ಮತ್ತೊಮ್ಮೆ ಯುದ್ಧ ಭೀತಿ ಎದುರಾಗಿದೆ. ವಿಶ್ವಸಂಸ್ಥೆ ವಿಶ್ವಶಾಂತಿಯನ್ನು ಮರುಸ್ಥಾಪಿಸಲು ಪ್ರಯತ್ನ ಪಡುತ್ತಿರುವ ಸಂದರ್ಭದಲ್ಲಿಯೇ ಇರಾನ್–ಇಸ್ರೇಲ್ ಯುದ್ಧ ಆರಂಭವಾಗಿರುವುದು ಶುಭಸೂಚನೆ ಅಲ್ಲ.

### ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯ ಮೈದಾನದಲ್ಲಿ ಪಂಚಾಚಾರ್ಯ ಧ್ವಜಾರೋಹಣ

# ಪಂಚಾಚಾರ್ಯರನ್ನು ಪೂಜಿಸುವುದೇ ಧರ್ಮ ಕಾರ್ಯ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಂಚ ಪೀಠಗಳು ವೀರಶೈವ ಧರ್ಮದ ಪ್ರಧಾನ ಕೇಂದ್ರಗಳು. ಈ ಪೀಠಗಳ ಆಚಾರ್ಯರೇ ಈ ಧರ್ಮದ ಜಗದ್ಗುರುಗಳು. ಇವರನ್ನೇ ಪಂಚಾಚಾರ್ಯರೆಂದು ಕರೆಯಲಾಗುತ್ತಿದೆ. ಪಂಚಾಚಾರ್ಯರನ್ನು ಪೂಜಿಸುವುದೇ ವೀರಶೈವ ಧರ್ಮದ ಪ್ರಥಮ ಕಾರ್ಯ ಎಂದು ರೋಣ ಗುಲಗಂಜಿ ಮಠದ ಶ್ರೀ ಗುರುಪಾದ ಮಹಾಸ್ವಾಮಿಗಳವರು ಹೇಳಿದರು.

ಅಬ್ಬಿಗೇರಿಯ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯ ಮೈದಾನದಲ್ಲಿ ಅ.3ರಿಂದ ಪ್ರಾರಂಭವಾಗಲಿರುವ ಶ್ರೀಮದ್ ರಂಭಾಪುರಿ ಜಗದ್ಗುರುಗಳವರ ಶರನ್ನವರಾತ್ರಿ ದಸರಾ ಮಹೋತ್ಸವಕ್ಕೆ ಮುನ್ನಾ ದಿನವಾದ ಅ.2ರಂದು ಪಂಚಾಚಾರ್ಯ ಧ್ವಜಾರೋಹಣ ನೆರವೇರಿಸುವ ಮೂಲಕ ಚಾಲನೆ ನೀಡಿ ಅವರು ಆಶೀರ್ವಚನ ನೀಡಿದರು.

ಪುರಾಣಗಳು ಹೇಳುವಂತೆ ಶಿವನಿಗೆ ಅನೇಕ ಪ್ರಮಥ ಗಣಗಳಿವೆ. ಅದರಲ್ಲಿ ರೇಣುಕ, ದಾರುಕ, ಘಂಟಾಕರ್ಣ, ಧೇನುಕರ್ಣ, ವಿಶ್ವಕರ್ಣರೆಂಬ ಐವರು ಪ್ರಮಥ ಶಿವಗಣಾಧೀಶರು. ಶಿವನ ಅತ್ಯಂತ ನಿಕಟ ಸ್ವರೂಪರೇ ಆಗಿರುವ ಇವರು ಆಚಾರ್ಯರೆಂದು ಪ್ರಸಿದ್ಧರಾದವರು. ಯಾವುದೇ ಶುಭ ಕಾರ್ಯ ಕೈಗೊಳ್ಳುವಾಗ ಪಂಚಾಚಾರ್ಯರನ್ನು ನೆನೆಯುವುದು ವೀರಶೈವ ಧರ್ಮದ ಸಂಪ್ರದಾಯ ಎಂದು ಶ್ರೀ ಗುರುಪಾದ ಮಹಾಸ್ವಾಮಿಗಳು ಹೇಳಿದರು.



ನೇತೃತ್ವ ವಹಿಸಿದ್ದ ಸಿದ್ದರಬೆಟ್ಟ ಮತ್ತು ಅಬ್ಬಿಗೇರಿ ಹಿರೇಮಠ ಶ್ರೀ ವೀರಭದ್ರ ಶಿವಾಚಾರ್ಯರು ಆಶೀರ್ವಚನ ನೀಡಿ, ನಾಡಿನಲ್ಲಿ ಸಾವಿರಾರು ಮಠಗಳಿವೆ, ಪೀಠಗಳಿವೆ. ಇವುಗಳಲ್ಲಿ ವಿಶಿಷ್ಠವಾದ ಪರಂಪರೆ ರಂಭಾಪುರಿ ಪೀಠದ್ದಾಗಿದೆ. ಈ ಪೀಠದ ಪರಂಪರೆಯಂತೆ ಪ್ರತಿ ವರ್ಷ ದಸರೆಯಲ್ಲಿ ಒಂದೊಂದು ಕಡೆ ಗುರುಮನೆ ದಸರಾ ಮಹೋತ್ಸವವನ್ನು ಆಚರಿಸಲಾಗುತ್ತಿದೆ. ಈ ಸಾರೆ ಆ ಮಹತ್ಕಾರ್ಯ ಅಬ್ಬಿಗೇರಿ ಮತ್ತು ಸುತ್ತಲಿನ ಭಕ್ತರಿಗೆ ದೊರಕಿದೆ ಎಂದರು.

ಈ ಸಂದರ್ಭದಲ್ಲಿ ನರೇಗಲ್ಲದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು, ಯಡಿಯೂರಿನ ರೇಣುಕ ಶಿವಾಚಾರ್ಯರು, ನಾಗವಂದದ ಶಿವಯೋಗಿ ಶಿವಾನಂದ ಶಿವಾಚಾರ್ಯರು, ನಾಗತಾಣ–ಸಗರದ ಸೋಮಶೇಖರ ಶಿವಾಚಾರ್ಯರು, ಸಂಗೊಳ್ಳಿಯ ಗುರುಲಿಂಗ ಶಿವಾಚಾರ್ಯರು, ಪಾಲಾಕ್ಷಯ್ಯ ಅರಳೆಲೆಮಠ, ಬಸವರಾಜ ಪಲ್ಲೇದ, ಮಂಜುನಾಥ ಅಂಗಡಿ, ರೂಪಾ ಅಂಗಡಿ, ನೀಲಪ್ಪ ದ್ವಾಸಲ, ಎಂ. ಲೋಹಿತ್, ಅಂದಪ್ಪ ವೀರಾಪೂರ, ಬಸವರಾಜ ವೀರಾಪುರ, ಎಂ.ಎಸ್. ಚಿನ್ನೂರ, ಬಿ.ಎಂ. ಹನುಮನಾಳ, ಜಗದೀಶ ಅವರೆಡ್ಡಿ, ಬಿ.ಎಸ್. ಜಗಾಪೂರ, ಮಲ್ಲು ಯಲ್ಲರೆಡ್ಡಿ, ರಾಜು ಬೆಂಗಳೂರಶೆಟ್ಟರ, ಶಿವಲಿಂಗಪ್ಪ ತಿಪ್ಪಶೆಟ್ಟಿ, ಬಾಬು ಬನ್ನಿಕೊಪ್ಪ, ಚಂದ್ರಗೌಡ ಪಾಟೀಲ, ಗಣೇಶ ಶಸ್ತ್ರಿಮಠ, ವಿನಾಯಕ ಜೋಷಿ, ಮಹೇಶ ಹೊಂಬಳ್ಳಿ, ಶಂಕ್ರಪ್ಪ ಹೊಂಬಳ್ಳಿ, ಶಿವಾನಂದ ಗುಗ್ಗರಿ, ಶಂಕ್ರಪ್ಪ ಬ್ಯಾಡಗಿ, ವಿಜಯಕುಮಾರ ಇಟಗಿ, ಬಸವರಾಜ ಜಂತ್ಲಿ, ಮಹಾದೇವಪ್ಪ ಇಟಗಿ ಇನ್ನೂ ಮುಂತಾದವರು ಉಪಸ್ಥಿತರಿದ್ದರು.

# ಮೂಲಭೂತ ಸೌಲಭ್ಯಕ್ಕಾಗಿ ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ


ಕರವೇ ಪ್ರವೀಣಶೆಟ್ಟಿ ಬಣದ ಕಾರ್ಯಕರ್ತರ ನೇತೃತ್ವದಲ್ಲಿ ವಾರ್ಡ್ ನಂ–15 ರ ಗೋಸಾವಿ ಸಮಾಜದವರು ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಲಭ್ಯಕ್ಕಾಗಿ ಮಂಗಳವಾರ ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ಕರವೇ ಪ್ರವೀಣಶೆಟ್ಟಿ ಬಣದ ತಾಲೂಕಾಧ್ಯಕ್ಷ ಮಹೇಶ ಕಲಘಟಗಿ ಪಟ್ಟಣದ ಕೇಂದ್ರ ಭಾಗದಲ್ಲಿಯೇ ಅನೇಕ ವರ್ಷಗಳಿಂದ ಗುಡಿಸಲುಗಳಲ್ಲಿಯೇ ವಾಸಿಸುವ ಗೋಸಾವಿ ಸಮಾಜದ 30 ಕುಟುಂಬಗಳ ನೂರಾರು ಜನರು ಕುಡಿಯುವ ನೀರು, ಚರಂಡಿ, ವಿದ್ಯುತ್, ಶೌಚಾಲಯ ಸೇರಿ ಅಗತ್ಯ ಸೌಲಭ್ಯಗಳಿಲ್ಲದೇ ಅತ್ಯಂತ ಕೆಟ್ಟ ವಾತಾವರಣದಲ್ಲಿ ಬದುಕುತ್ತಿದ್ದಾರೆ. ಈ ಪ್ರದೇಶದಲ್ಲಿ ವಾಸಿಸುವ ಗೋಸಾವಿ ಸಮಾಜದ ಜನರು ರೋಗರುಜಿನಗಳಿಗೆ ತುತ್ತಾಗುತ್ತಿದ್ದಾರೆ. 2 ತಿಂಗಳಿಂದ ಜನತೆ ನೀರಿಗಾಗಿ ಪರದಾಡುತ್ತಿದ್ದಾರೆ. ಜನರ ಸಹನೆ, ತಾಳ್ಮೆಗೂ ಮಿತಿಯಿದೆ. ಈ ಬಗ್ಗೆ ಪುರಸಭೆ, ಜನಪ್ರತಿನಿಧಿಗಳು ಎಚ್ಚೆತ್ತುಕೊಂಡು ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು ಎಂದು ಆಗ್ರಹಿಸಿದರು.



ಪುರಸಭೆ ಉಪಾಧ್ಯಕ್ಷ ಫಿರ್ದೋಸ್ ಆಡೂರ ಮನವಿ ಸ್ವೀಕರಿಸಿದರು. ಈ ವೇಳೆ ಬಾಳಪ್ಪ ಗೋಸಾವಿ, ದಾದಪ್ಪ ಗೋಸಾವಿ, ನಿಖಿಲ ಗೋಸಾವಿ, ಹರೀಶ ಗೋಸಾವಿ, ಕರವೇ ಪ್ರವೀಣ ಶೆಟ್ಟಿ ಬಣದ ಕಾರ್ಯಕರ್ತರಾದ ಮಂಜುನಾಥ ಗಾಂಜಿ, ಅಮರೀಶ ಗಾಂಜಿ, ಶ್ರೇಯಾಂಕ ಹಿರೇಮಠ, ಭರಮಣ್ಣ ಗೌಳಿ, ಚಂದ್ರು ಪಾಣಿಗಟ್ಟಿ, ಪ್ರವೀಣ ದಶಮನಿ, ನವೀನ ಗುರಿಕಾರ, ಮುರಳೀಧರ ಮಲ್ಲಸಮುದ್ರ ಸೇರಿ ಗೋಸಾವಿ ಸಮಾಜದ ಮಹಿಳೆಯರು ಪಾಲ್ಗೊಂಡಿದ್ದರು.

# ಉತ್ತಮ ಶಾಲೆ ಪ್ರಶಸ್ತಿ ಪ್ರದಾನ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಅಂಬೇಡ್ಕರ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಗದಗ ತಾಲೂಕಿನಲ್ಲಿ ಉತ್ತಮ ಸಾಧನೆ ಮಾಡಿದ ಹೊಸೂರದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರು ಉತ್ತಮ ಶಾಲಾ ಪ್ರಶಸ್ತಿಯನ್ನು ಸ್ವೀಕರಿಸಿದರು.

ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರು ಮತ್ತು ಸದಸ್ಯರು ಶಿಕ್ಷಣದ ಬಗ್ಗೆ ಅಪಾರ ಕಾಳಜಿಯನ್ನು ಹೊದಿದ್ದು, ಶಾಲೆಯಲ್ಲಿ ತಮ್ಮ ಹಣದಿಂದ ಎಲ್.ಕೆ.ಜಿ. ಮತ್ತು ಯು.ಕೆ.ಜಿ ತರಗತಿಗಳನ್ನು ಪ್ರಾರಂಭಿಸಿ ಮಕ್ಕಳಿಗೆ ಖಾಸಗಿ ಶಾಲೆಯಲ್ಲಿ ದೊರೆಯುವ ಎಲ್ಲ ಸೌಲಭ್ಯಗಳನ್ನು ಒದಗಿಸಿ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿರುವುದರಿಂದ ಶಾಲೆಯ ದಾಖಲಾತಿಯಲ್ಲಿ ಹೆಚ್ಚಳವಾಗಿದೆ. ಈ ಎಲ್ಲ ಅಂಶಗಳ ಆಧಾರದಲ್ಲಿ ಇಲಾಖೆ ಅಧಿಕಾರಿಗಳು ಉತ್ತಮ ಶಾಲೆ ಎಂದು ಆಯ್ಕೆ ಮಾಡಿದೆ.

ಶಾಲೆಯ ಪ್ರಗತಿಗಾಗಿ ಶ್ರಮಿಸಿದ ಶಿಕ್ಷಕರಾದ ಆರ್.ಎಂ. ಪೂಜಾರ, ಎಂ.ಜಿ. ಮಳ್ಳೂರ, ವಿ.ಡಿ. ಬಡಿಗೇರ, ಎಸ್.ಬಿ. ಭಜಂತ್ರಿ, ಲಾವಣ್ಯಾ ದೇಸಾಯಿಮಠ, ಸ್ವಪ್ನಾ ಬಂಡಿವಡ್ಡರ ಎಸ್.ಡಿ.ಎಂ.ಸಿ. ಅಧ್ಯಕ್ಷ ಶರಣಪ್ಪ ತಳವಾರ ಹಾಗೂ ಸರ್ವ ಸದಸ್ಯರು, ಮಾರ್ಗದರ್ಶಕರಾದ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎ.ವಿ. ನಡುವಿನಮನಿ, ನಿವೃತ್ತ ಉಪನಿರ್ದೇಶಕ ಎಂ.ಎ. ರಡೇರ, ಕ್ಷೇತ್ರ ಸಮನ್ವಯಾಧಿಕಾರಿ ಜೆ.ಎ. ಭಾವಿಕಟ್ಟಿ, ಸಿ.ಆರ್.ಪಿ. ಎಸ್.ಜಿ. ಚವಡಿ, ವಿ.ಎಂ. ಹಿರೇಮಠ, ಎಸ್. ಆರ್. ಬಂಡಿ, ಮಕ್ಕಳ ಪಾಲಕರು ಮತ್ತು ಪೋಷಕರು, ಗ್ರಾಮ ಪಂಚಾಯತ್ ಯಲಿಶಿರೂರ ಸರ್ವ ಸದಸ್ಯರಿಗೆ ಶಾಲೆಯ ಪರವಾಗಿ ಪ್ರಧಾನ ಗುರುಗಳು ಧನ್ಯವಾದಗಳನ್ನು ತಿಳಿಸಿದ್ದಾರೆ.


### ಅಕ್ಟೋಬರ್ 7ರಿಂದ ಇ-ಖಾತಾ ಮಾತ್ರ ಲಭ್ಯ: ಜಿಲ್ಲಾಧಿಕಾರಿ ದಿವ್ಯ ಪ್ರಭು

# ಇ-ಖಾತಾ ಸಂಯೋಜನೆಗೆ ಆದೇಶ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ನಗರಾಭಿವೃದ್ಧಿ ಇಲಾಖೆಯು ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಆಸ್ತಿಗಳ ಹಕ್ಕು ವರ್ಗಾವಣೆಗೆ ಸಂಬಂಧಿಸಿದಂತೆ ಇ–ಆಸ್ತಿ ತಂತ್ರಾಂಶ ಮತ್ತು ಕಾವೇರಿ ತಂತ್ರಾಂಶವನ್ನು ಸಂಯೋಜನೆ ಮಾಡಲು ಸಮ್ಮತಿ ನೀಡಿದೆ. ಧಾರವಾಡ ಜಿಲ್ಲೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಸ್ಥಿರಾಸ್ತಿಗಳ ನೋಂದಣಿಯನ್ನು ಇ–ಆಸ್ತಿ ತಂತ್ರಾಂಶದಿಂದ ಕಡ್ಡಾಯವಾಗಿ ಮಾಹಿತಿ ಪಡೆದು ನೋಂದಾಯಿಸಲು ಸೂಚಿಸಿದ್ದು, ಇ–ಆಸ್ತಿ ತಂತ್ರಾಂಶವನ್ನು ಕಾವೇರಿ–2.0 ತಂತ್ರಾಂಶದೊಂದಿಗೆ ಸಂಯೋಜಿಸಿ, ಅಕ್ಟೊಬರ್ 07, 2024ರಿಂದ ಜಾರಿಗೆ ಬರುವಂತೆ ಸರ್ಕಾರವು ಆದೇಶಿಸಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಧಾರವಾಡ ಜಿಲ್ಲೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಸ್ಥಿರಾಸ್ತಿಗಳ ನೋಂದಣಿಯನ್ನು ಅ.07, 2024ರಿಂದ ಧಾರವಾಡ ಜಿಲ್ಲಾ ವ್ಯಾಪ್ತಿಯ ಎಲ್ಲಾ ಉಪ–ನೋಂದಣಿ ಕಛೇರಿಗಳಲ್ಲಿ ನಗರ ಸ್ಥಳೀಯ ಸಂಸ್ಥೆಗಳ ತಂತ್ರಾಂಶದಿಂದಲೇ ಇ–ಖಾತಾ ಪಡೆಯಬೇಕಿದೆ ಎಂದು ತಿಳಿಸಿದ್ದಾರೆ.



ಧಾರವಾಡ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿಗಳ ಹಕ್ಕು ವರ್ಗಾವಣೆಗೆ ಸಂಬಂಧಿಸಿದಂತೆ ಇ–ಆಸ್ತಿ, ಖಾತಾ ತಂತ್ರಾಂಶ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ. ಕೃಷಿ ಜಮೀನಿನ ನೋಂದಣಿಗೆ ಭೂಮಿ ತಂತ್ರಾಂಶದೊಂದಿಗೆ 2006ರಿಂದಲೇ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ ತಂತ್ರಾಂಶವನ್ನು ಸಂಯೋಜನೆ ಮಾಡಲಾಗಿದೆ. ಜಮೀನಿನ ಸರ್ವೇ ನಕ್ಷೆ (ಸ್ಕೆಚ್) ನಮೂನೆ 11ಇ ಇರುವ ಮೋಜಣಿ ತಂತ್ರಾಂಶದೊಂದಿಗೆ ಕಾವೇರಿ ತಂತ್ರಾಂಶವನ್ನು ಅಕ್ಟೋಬರ್ 05, 2016ರಿಂದ ಸಂಯೋಜನೆ ಮಾಡಲಾಗಿದೆ. ಗ್ರಾಮ ಪಂಚಾಯತ ವ್ಯಾಪ್ತಿಯ ಕೃಷಿಯೇತರ ಸ್ವತ್ತುಗಳ ದಸ್ತಾವೇಜುಗಳ ನೋಂದಣಿಗಾಗಿ 2014ರಿಂದ ಸಂಯೋಜನೆಗೊಳಿಸಲಾಗಿದೆ.

ನಗರ ಪ್ರದೇಶಗಳಲ್ಲಿನ ಕೃಷಿಯೇತರ ಆಸ್ತಿಗಳಿಗೆ ಸಂಬಂಧಿಸಿದಂತೆ ಇ–ಆಸ್ತಿ ತಂತ್ರಾಂಶವನ್ನು ರೂಪಿಸಿದ್ದು, ಇ–ಆಸ್ತಿ ತಂತ್ರಾಂಶವನ್ನು ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ 2.0 ತಂತ್ರಾಂಶದೊಂದಿಗೆ ಪ್ರಾಯೋಗಿಕವಾಗಿ ರಾಮನಗರ ಮತ್ತು ಕನಕಪುರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಸ್ವತ್ತುಗಳಿಗೆ ಸಂಬಂಧಿಸಿದಂತೆ ಕಾವೇರಿ–2.0 ತಂತ್ರಾಂಶದೊಂದಿಗೆ ಸಂಯೋಜನೆ ಮಾಡಿ 29–01–2020ರಿಂದ ನೊಂದಣಿ ಮಾಡುತ್ತಿರುವುದು ಯಶಸ್ವಿಯಾಗಿದೆ.

ಇ–ಖಾತಾ ಸಂಯೋಜನೆ ಪ್ರಯೋಜನಗಳು ಇ–ಆಸ್ತಿ ತಂತ್ರಾಂಶದಿಂದಾಗಿ ಸ್ವತ್ತುಗಳ ನೋಂದಣಿ ವೇಳೆ ಸಾರ್ವಜನಿಕರು ಮೋಸ ಹೋಗುವುದನ್ನು ತಡೆಯುವುದು ಮತ್ತು ಇ–ಖಾತಾದಿಂದ ಮಾತ್ರ ಸ್ವತ್ತಿನ ಸ್ವರೂಪ ಮತ್ತು ನೈಜ ಮಾಲೀಕರನ್ನು ಗುರುತಿಸಲು ಸಾಧ್ಯವಾಗುತ್ತದೆ.

ನೈಜ ಮಾಲೀಕರಿಗೆ ವಂಚಿಸಿ ಬೇರೆಯವರಿಂದ ಸ್ವತ್ತುಗಳ ನೋಂದಣಿ ಆಗುವುದನ್ನು ತಪ್ಪಿಸಬಹುದಾಗಿದೆ. ಹಾಗೂ ಸ್ವತ್ತುಗಳ ಖರೀದಿದಾರರಿಗೆ ಸ್ವತ್ತಿನ ನೈಜ ಮಾಲೀಕರನ್ನು ಗುರುತಿಸುವುದು, ಭವಿಷ್ಯದಲ್ಲಿ ಉಂಟಾಗಬಹುದಾದ ವ್ಯಾಜ್ಯ ಕಾನೂನು ತೊಂದರೆಗಳನ್ನು ತಪ್ಪಿಸುವ ಉದ್ದೇಶವನ್ನು ಈ ತಂತ್ರಾಂಶ ಹೊಂದಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಜೆಡಿಎಸ್‌ನಿಂದ ರಾಜ್ಯಪಾಲರಿಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ನಾಡು ಕಂಡ ಧೀಮಂತ ನಾಯಕ, ಜೆಡಿಎಸ್ ಪಕ್ಷದ ರಾಜ್ಯಾಧ್ಯಕ್ಷರು ಹಾಗೂ ಮಾಜಿ ಮುಖ್ಯಮಂತ್ರಿಗಳು ಮತ್ತು ಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವರಾದ ಎಚ್.ಡಿ. ಕುಮಾರಸ್ವಾಮಿರವರನ್ನು ಗುರಿಯನ್ನಾಗಿಸಿ ಎಡಿಜಿಪಿ ಎಂ.ಚಂದ್ರಶೇಖರ ನಿಂದಿಸಿದ್ದು, ಇವರ ಮೇಲೆ ಕ್ರಮ ಕೈಗೊಳ್ಳುವಂತೆ ಗದಗ ಜಿಲ್ಲಾ ಜೆಡಿಎಸ್‌ನಿಂದ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ತಮ್ಮ ಸಿಬ್ಬಂದಿಗಳಿಗೆ ಪತ್ರ ಬರೆಯುವ ನೆಪದಲ್ಲಿ ಹಂದಿ ಎಂಬ ಪದವನ್ನು ಬಳಸಿ ರಾಜ್ಯಾಧ್ಯಕ್ಷರಿಗೆ ಹಾಗೂ ಲಕ್ಷಾಂತರ ಕಾರ್ಯಕರ್ತರ ಮನಸ್ಸಿಗೆ ಘಾಸಿಗೊಳಿಸಿದ್ದಾರೆ.




ಇಂತಹ ದುರಹಂಕಾರ ಹೊಂದಿದ ಮತ್ತು ಸರಕಾರದ ಕೈಗೊಂಬೆಯಾಗಿ ಕೆಲಸ ನಿರ್ವಹಿಸುತ್ತಿರುವ ಅಧಿಕಾರಿ ಎಸ್‌ಐಟಿ ಸಂಸ್ಥೆಗೆ ಕಳಂಕವಿದ್ದಂತೆ.

ಕೇಂದ್ರದ ಮಂತ್ರಿಗಳು ಮತ್ತು ಮಾಜಿ ಮುಖ್ಯಮಂತ್ರಿಗಳು ಎಂಬುದನ್ನು ಅರಿಯದೆ ಏಕವಚನದಲ್ಲಿ ನಿಂದಿಸಿರುವುದು ಅಕ್ಷಮ್ಯ ಅಪರಾಧ. ಇಂತಹ ಅಧಿಕಾರಿಯ ಬಗ್ಗೆ ಸಮಗ್ರ ತನಿಖೆ ನಡೆಸುವಂತೆ ಮತ್ತು ಇವರ ಸೇವೆಯನ್ನು ರಾಜ್ಯದಿಂದ ಮರಳಿ ಕೇಂದ್ರಕ್ಕೆ ಪಡೆಯಲು ಕೇಂದ್ರ ಗೃಹ ಇಲಾಖೆಗೆ ನಿರ್ದೇಶಿಸುವಂತೆ ಕೋರಿ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯಪಾಲರಿಗೆ ಮನವಿಯನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾ ಉಪಾಧ್ಯಕ್ಷರಾದ ಗಿರೀಶ ಸಂಶಿ, ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಎಚ್.ಕೊಪ್ಪಳ, ಸಂಘಟನಾ ಕಾರ್ಯದರ್ಶಿ ಕಾಸಿಂಸಾಬ ದೊಡಮನಿ, ಮುಖಂಡರಾದ ಎಂ. ಎಸ್. ಪರ್ವತಗೌಡ್ರ, ಬಸವರಾಜ, ಶ್ರೀನಿವಾಸ ಓಂಕಾರ್, ಇಮಾಮಸಾಬ ಉಮಚಗಿ, ಅಲ್ತಾಫ ಖಾಜಿ, ಮಂಜುನಾಥ ನರೇಗಲ್, ಹನುಮಂತ, ಎಂ.ಪಿ. ಮುಳುಗುಂದ, ದಾವಲಸಾಬ ನಾಗನೂರ, ಜೆಡಿಎಸ್ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸ್ವಚ್ಛತೆ ಎಲ್ಲರ ಮಂತ್ರವಾಗಲಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸ್ವಚ್ಛತೆಯೇ ಸೇವೆ ಎನ್ನುವ ಕೇಂದ್ರ ಸರಕಾರದ ಮಹತ್ವದ ಕಾರ್ಯಕ್ರಮ ಯಶಸ್ವಿಗೊಳಿಸುವಲ್ಲಿ ವಿದ್ಯಾರ್ಥಿಗಳ ಪಾತ್ರ ಮುಖ್ಯವಾಗಿದೆ ಎಂದು ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗ ಕಲಾ ಹಾಗೂ ವಾಣಿಜ್ಯ ಪದವಿ ಮಹಿಳಾ ವಿದ್ಯಾಲಯದ ಪ್ರಾಚಾರ್ಯ ವಿಜಯಕುಮಾರ ಬಿಳೇಯಲಿ ಹೇಳಿದರು.

ಅವರು ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗ ಕಲಾ ಹಾಗೂ ವಾಣಿಜ್ಯ ಪದವಿ ಮಹಿಳಾ ವಿದ್ಯಾಲಯದ ಎನ್‌ಎಸ್‌ಎಸ್ ಘಟಕದಡಿ ಸ್ವಚ್ಛತೆಯೇ ಸೇವೆ ಕಾರ್ಯಕ್ರಮದಲ್ಲಿ ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಸ್ವಚ್ಛತಾ ಕಾರ್ಯಕ್ರಮ ಕೈಗೊಂಡ ಸಚಿದರ್ಭದಲ್ಲಿ ಮಾತನಾಡಿ, ಸ್ವಚ್ಛತೆ ಪ್ರತಿಯೊಬ್ಬ ಪ್ರಜೆಯ ಮಂತ್ರವಾಗಬೇಕು. ಅಂದಾಗ ಮಾತ್ರ ಆರೋಗ್ಯಕರ, ಸ್ವಾಸ್ಥ, ಸುಂದರ ಸಮಾಜ–ರಾಷ್ಟ್ರ ನಿರ್ಮಾಣ ಸಾಧ್ಯ ಎಂದರು.

ಈ ವೇಳೆ ಎನ್‌ಎಸ್‌ಎಸ್ ಘಟಕದ ಅಧಿಕಾರಿಗಳಾದ ಪರಮೇಶ್ವರ ತಡಹಾಳ, ರಶ್ಮಿ ಮೇಲಗಿರಿ, ಪ್ರಕಾಶ ಹರ್ಲಾಪುರ, ಶರಣಬಸವ ಅಣ್ಣಿಗೇರಿ, ಸಂಜೀವ ಬಾರಕೇರ, ದೈಹಿಕ ನಿರ್ದೇಶಕ ರೇವಂತ ಕ್ಷತ್ರಿಯ, ನಿಂಗರಾಜ ಕುಂಬಾರ, ಸವಿತಾ ಪವಾಡಣ್ಣವರ, ಮಲ್ಲಿಕಾರ್ಜುನ ಶಿವಣ್ಣವರ, ಮಂಜುನಾಥ ಹುಲಗೂರ, ಪದವಿ ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ತಾಲೂಕು ಮಟ್ಟದ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ವಿಜ್ಞಾನ ವಿಚಾರಗೋಷ್ಠಿ

# ವಿಜ್ಞಾನ ಇಂದು ಎಲ್ಲೆಡೆ ಹಾಸುಹೊಕ್ಕಾಗಿದೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮನುಕುಲದ ಪ್ರಯೋಜನಕ್ಕಾಗಿ ಇಂದಿನ ವಿಜ್ಞಾನ ಮತ್ತು ತಂತ್ರಜ್ಞಾನ ಬಳಕೆಯಾಗಬೇಕಾಗಿದೆ. ಅದನ್ನು ಪ್ರೌಢಶಾಲಾ ಹಂತದಲ್ಲಿಯೇ ವಿದ್ಯಾರ್ಥಿಗಳ ಪಠ್ಯಗಳಲ್ಲಿ ಸಮನ್ವಯಗೊಳಿಸಿ ಬೋಧಿಸಲಾಗುತ್ತಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ ಅಭಿಪ್ರಾಯಪಟ್ಟರು.

ಅವರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ವತಿಯಿಂದ ಬಟ್ಟೂರಿನ ಸರಕಾರಿ ಪ್ರೌಢಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ತಾಲೂಕು ಮಟ್ಟದ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ವಿಜ್ಞಾನ ವಿಚಾರಗೋಷ್ಠಿ, ವಿಜ್ಞಾನ ನಾಟಕ ಹಾಗೂ ವಿಜ್ಞಾನ ವಸ್ತು ಪ್ರದರ್ಶನ ಸ್ಪರ್ಧೆಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಜ್ಞಾನ ವಸ್ತು ಪ್ರದರ್ಶನ ಉದ್ಘಾಟಿಸಿ ಮಾತನಾಡಿದ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಗದಗ ಜಿಲ್ಲಾ ಅಧ್ಯಕ್ಷ ರಮೇಶ್ ರಿತ್ತಿ, ವಿಜ್ಞಾನದ ಕಲಿಕೆ ಅದು ಇತರೆ ವಿಷಯಗಳಂತೆ ಅಲ್ಲ. ವಿದ್ಯಾರ್ಥಿಗಳು ತಮ್ಮ ನಿತ್ಯ ಜೀವನದಲ್ಲಿ ವಿಜ್ಞಾನವನ್ನು ಸಹ ಸಂಬಂಧ ಕಲ್ಪಿಸಿ ಕಲಿಯಬೇಕು. ಅದಕ್ಕಾಗಿ ಈಗ ಪ್ರಾಯೋಗಿಕ ಕಲಿಕೆಗೆ ಹೆಚ್ಚು ಒತ್ತು ನೀಡಲಾಗುತ್ತಿದೆ ಎಂದರು.




ಪ್ರಾಸ್ತಾವಿಕವಾಗಿ ಮಾತನಾಡಿದ ತಾಲೂಕಾ ನೋಡಲ್ ಅಧಿಕಾರಿ ಈಶ್ವರ ಮೆಡ್ಲೇರಿ, ಎರಡೂ ತಾಲೂಕಿನ ಎಲ್ಲ ಸರಕಾರಿ, ಅನುದಾನಿತ ಹಾಗೂ ಅನುದಾನರಹಿತ ಪ್ರೌಢಶಾಲೆಗಳಿಂದ ವಿದ್ಯಾರ್ಥಿಗಳು ವಿಜ್ಞಾನ ನಾಟಕ, ವಿಜ್ಞಾನ ಗೋಷ್ಠಿ ಹಾಗೂ ವಿಜ್ಞಾನದ ವಸ್ತು ಪ್ರದರ್ಶನವನ್ನು ಮಾರ್ಗದರ್ಶಿ ಶಿಕ್ಷಕರಿಂದ ತರಬೇತಿ ಪಡೆದು ಪ್ರದರ್ಶನ ನೀಡುತ್ತಾರೆ. ಪ್ರತಿ ವರ್ಷ ನಮ್ಮ ತಾಲೂಕಿನಿಂದ ವಿಭಾಗ ಮಟ್ಟಕ್ಕೆ ಹಾಗೂ ರಾಜ್ಯಮಟ್ಟಕ್ಕೆ ಆಯ್ಕೆಯಾಗುತ್ತಿರುವುದು ಅಭಿಮಾನ ಪಡುವ ವಿಷಯವಾಗಿದೆ ಎಂದರು.

ಶಾಲೆಯ ಮುಖ್ಯೋಪಾಧ್ಯಾಯೆ ವಿ.ಬಿ. ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಪ್ರೌಢಶಾಲಾ ಸಹಶಿಕ್ಷಕ ಸಂಘದ ಕಾರ್ಯದರ್ಶಿ ಎನ್.ಎನ್. ಸುಣಗಾರ, ಶಿಕ್ಷಕರಾದ ಎಂ.ಎಸ್. ಮಳಿಮಠ, ಇ.ಸಿ.ಓಗಳಾದ ಉಮೇಶ ಹುಚ್ಚಯ್ಯನಮಠ, ಹರೀಶ ಎಸ್, ನಿರ್ಣಾಯಕರಾದ ಈರಣ್ಣ ಗಾಣಿಗೇರ, ಎಚ್.ಬಿ. ಮೇಟಿ, ಮಂಜುಶ್ರೀ ಬಡಿಗೇರ, ಶಂಕ್ರಮ್ಮ ಕರೇಗೌಡ್ರ, ಗಿರೀಶ ಸುಗಜಾನರ, ಆರ್.ಆರ್. ಅಯ್ಯನಗೌಡ್ರ, ಬಿ.ಆರ್.ಪಿ ಬಿ.ಎಂ. ಯರಗುಪ್ಪಿ, ಸಿ.ಆರ್.ಪಿ ನವೀನ ಅಂಗಡಿ ಉಪಸ್ಥಿತರಿದ್ದರು.

ಮಂಜುನಾಥ ಹುಣಸಿಮರದ ನಿರೂಪಿಸಿದರು. ಶೇಖರ ಚಿಕ್ಕಣ್ಣವರ ಸ್ವಾಗತಿಸಿದರು. ಎಲ್.ಎಚ್.ಅವ್ವಣ್ಣವರ ವಂದಿಸಿದರು. ಶಿಕ್ಷಕರಾದ ರವೀಂದ್ರ ಮಳಲಿ, ಎಸ್.ಎ. ಗೊರವನಕೊಳ್ಳ, ವೀಣಾ ಜಾಧವ, ಎಂ.ಐ. ಡಂಬಳ, ಎಸ್.ಎಸ್. ಜಾಲಿಹಾಳ, ಜಿ.ಎಸ್. ಪಾಟೀಲ, ಎಂ.ವಿ. ದಾಮೋದರ, ಚೇತನಾ ಹಿರೇಮಠ ಹಾಜರಿದ್ದರು. 25 ಪ್ರೌಢಶಾಲೆಗಳಿಂದ ಸುಮಾರು 100 ಕ್ಕೂ ಅಧಿಕ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

**ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ ಶಾಲೆಗಳು**

ವಿಜ್ಞಾನ ಗೋಷ್ಠಿ: ಪ್ರಥಮ–ಚೇತನಾ ಜನಗೊಣ್ಣನವರ, ಸರಕಾರಿ ಪ್ರೌಢಶಾಲೆ, ಮಾಡಳ್ಳಿ. ವಿಜ್ಞಾನ ವಸ್ತುಪ್ರದರ್ಶನ (ವೈಯಕ್ತಿಕ ವಿಭಾಗ)–ಪ್ರಥಮ–ಗಿರೀಶ ಮೇಟಿ, ಸರಕಾರಿ ಪ್ರೌಢಶಾಲೆ, ಬಟ್ಟೂರು, ವಿಜ್ಞಾನ ವಸ್ತುಪ್ರದರ್ಶನ (ಸಾಮೂಹಿಕ ವಿಭಾಗ) ಪ್ರಥಮ–ಪರಮೇಶ ಹಾಗೂ ಸಂಗಡಿಗರು ಮೊರಾರ್ಜಿ ದೇಸಾಯಿ ವಸತಿ ಶಾಲೆ ಒಡೆಯರ ಮಲ್ಲಾಪುರ.

ವಿಜ್ಞಾನ ನಾಟಕ ಸ್ಪರ್ಧೆ: ಪ್ರಥಮ–ಮಧು ಹಾಗೂ ಸಂಗಡಿಗರು, ಶ್ರೀ ಭೀಮರಡ್ಡಿ ಅಳವಂಡಿ ಕೆ.ಪಿ.ಎಸ್ ಬೆಳ್ಳಟ್ಟಿ.

## ದೇವಿ ಪುರಾಣ ಇಂದಿನಿಂದ ಆರಂಭ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ರೇಣುಕಾ ಎಲ್ಲಮ್ಮ ದೇವಸ್ಥಾನದಲ್ಲಿ ಅ.3ರ ಸಾಯಂಕಾಲ 6 ಗಂಟೆಗೆ ನವರಾತ್ರಿ ಉತ್ಸವದ ಅಂಗವಾಗಿ ದೇವಿ ಪುರಾಣ ಪ್ರವಚನ ಆರಂಭಗೊಳ್ಳಲಿದೆ. ಪುರಾಣ ಪ್ರವಚನವನ್ನು ಗದಗ ಯೋಗ ಶಿಕ್ಷಕ ಸಿದ್ದಣ್ಣ ಜವಳಿ, ಪುರಾಣ ಪಠಣವನ್ನು ಶಿವಯ್ಯ ಮರಿದೇವರಮಠ, ಅಧ್ಯಕ್ಷತೆಯನ್ನು ಗೌರಮ್ಮಾ ಬಡ್ನಿ ವಹಿಸಲಿದ್ದು, ಉದ್ಘಾಟನೆಯನ್ನು ಗದಗ ಬೆಟಗೇರಿ–ನಗರಸಭೆ ಮಾಜಿ ಅಧ್ಯಕ್ಷೆ ಶಿವಲೀಲಾ ಅಕ್ಕಿ ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಎಸ್.ಸಿ. ಬಡ್ನಿ, ಶಿವಾನಂದ ಬೆಂತೂರ, ಧರ್ಮಸ್ಥಳ ಗ್ರಾಮಾಭಿವೃದ್ಧಿ ತಾಲೂಕಾ ಯೋಜನಾಧಿಕಾರಿ ಪುನಿತ, ದ್ಯಾಮಣ್ಣಾ ನೀಲಗುಂದ, ವಿಜಯ ನೀಲಗುಂದ, ಬಸವರಾಜ ಹಾರೋಗೇರಿ, ಬಸವರಾಜ ಕುಲಕರ್ಣಿ, ಜಗದೀಶ ಬಟ್ಟೂರ ಪಾಲ್ಗೊಳ್ಳಲಿದ್ದು, ಸಂಗೀತ ಮೋಹನ ಮದ್ದಿನ, ತಬಲಾ ಸಾಥ ವೇಂಕಟೇಶ ನೀಡುವರು ಎಂದು ಯೋಗ ಶಿಕ್ಷಕ ಪ್ರಕಾಶ ಮದ್ದಿನ ಪ್ರಕಟಣೆಗೆ ತಿಳಿಸಿದ್ದಾರೆ.



ಪಟ್ಟಣದ ಜೂನಿಯರ್ ಕಾಲೇಜು ಕೊಠಡಿಯಲ್ಲಿರುವ ಮಹಾತ್ಮ ಗಾಂಧೀಜಿಯವರ ಪುತ್ಥಳಿಗೆ ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ಪುಷ್ಪಗುಚ್ಛ ಸಲ್ಲಿಸಿ ಗೌರವಿಸಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ. ಅಂಜಿನಪ್ಪ, ಕುಬೇರಪ್ಪ, ಬಾಗಳಿ ಹೊಸೂರಪ್ಪ, ಪುರಸಭೆ ಸದಸ್ಯರು ಹಾಗೂ ಮುಖಂಡರು ಭಾಗವಹಿಸಿದ್ದರು.

## ಪ್ರಾಚೀನ ದೇವಸ್ಥಾನಗಳ ರಕ್ಷಣೆ ಅಗತ್ಯ




**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪ್ರಾಚೀನ ದೇವಸ್ಥಾನಗಳು ನಮ್ಮ ಸಂಸ್ಕೃತಿಯ ಪ್ರತೀಕ. ಅವುಗಳನ್ನು ಉಳಿಸಿಕೊಂಡು, ಸಂರಕ್ಷಿಸುವ ಕಾರ್ಯ ಪ್ರತಿಯೊಬ್ಬ ನಾಗರಿಕನದ್ದಾಗಿದೆ. ಈ ಬಗ್ಗೆ ನಿಮ್ಮಲ್ಲಿ ಅರಿವು ಮೂಡಿಸಲೆಂದೇ ಗಾಂಧಿ ಜಯಂತಿ ಅಂಗವಾಗಿ ಸ್ವಚ್ಛ ಭಾರತ ಕಾರ್ಯಕ್ರಮದ ಅಡಿಯಲ್ಲಿ ಹಮ್ಮಿಕೊಂಡಿರುವ ಸ್ವಚ್ಛತಾ ಕಾರ್ಯಕ್ರಮಕ್ಕೆ ನಿಮ್ಮನ್ನು ಈ ಸೋಮೇಶ್ವರ ದೇವಸ್ಥಾನಕ್ಕೆ ಕರೆತರಲಾಗಿದೆ ಎಂದು ಶ್ರೀ ಅನ್ನದಾನೇಶ್ವರ ಪದವಿ ಕಾಲೇಜಿನ ಎನ್.ಎಸ್.ಎಸ್. ಅಧಿಕಾರಿ ಡಾ. ಕಲ್ಲಯ್ಯ ಹಿರೇಮಠ ಹೇಳಿದರು.

ಈ ದೇವಸ್ಥಾನವು ಕಲ್ಯಾಣ ಚಾಲುಕ್ಯರ ಕಾಲದಲ್ಲಿ ನಿರ್ಮಾಣಗೊಂಡಿದ್ದು, ಇದರ ವಾಸ್ತುಶಿಲ್ಪವು ನಮ್ಮನ್ನು ಬೆರಗುಗೊಳಿಸುತ್ತದೆ. ಅತ್ಯಂತ ಪ್ರಾಚೀನವಾದ ಈ ದೇವಸ್ಥಾನದ ಪ್ರಾಂಗಣ ಮತ್ತು ಇತರೆ ಎಲ್ಲ ಕೆತ್ತನೆಗಳನ್ನು ಒಮ್ಮೆ ಬಂದು ನೋಡಬೇಕು. ನೀವು ಶ್ರದ್ಧೆಯಿಂದ ಈ ದೇವಸ್ಥಾನವನ್ನು ಸ್ವಚ್ಛಗೊಳಿಸಿ ಪುನೀತರಾಗಿ ಎಂದು ಕಲ್ಲಯ್ಯ ಹೇಳಿದರು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ, ಇನ್ನೋರ್ವ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಡಾ. ರತ್ನಾ ಪಾಟೀಲ, ಡಾ. ಶಿವರಾಮ ಮುಂತಾದವರು ಉಪಸ್ಥಿತರಿದ್ದು ದೇವಸ್ಥಾನದ ಸೌಂದರ್ಯವನ್ನು ಕಣ್ತುಂಬಿಕೊಂಡರು. ಸ್ವಚ್ಛತಾ ಕಾರ್ಯದಲ್ಲಿ ಅವರೂ ಪಾಲ್ಗೊಂಡು ತಮ್ಮ ಸೇವೆ ಸಲ್ಲಿಸಿದರು.

ಇದಕ್ಕೂ ಮೊದಲು ಸಂಭಂಧಿಸಿದ ಓಣಿಯಲ್ಲಿನ ಕಸ ಕಡ್ಡಿಗಳನ್ನು ತೆಗೆದು, ಗಟಾರಗಳನ್ನು ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಸ್ವಚ್ಛಗೊಳಿಸಿ, ಅಲ್ಲಿನ ನಿವಾಸಿಗಳಿಗೆ ಪರಿಸರ ಮತ್ತು ಸ್ವಚ್ಛತೆಯ ಜಾಗೃತಿಯನ್ನು ಮೂಡಿಸಿದರು.



ಲಕ್ಕುಂಡಿಯ ಮಾರುತಿ ದೇವಸ್ಥಾನದ ಆವರಣದಲ್ಲಿ ಬಿ.ಜೆ.ಪಿ ಸದಸ್ಯತಾ ಅಭಿಯಾನ ನಡೆಯಿತು.

ಬಿ.ಜೆ.ಪಿ ರಾಜ್ಯ ಯುವ ಮೋರ್ಚಾ ಉಪಾಧ್ಯಕ್ಷ ಚಿಕ್ಕಮಗಳೂರಿನ ಮಾಲತೇಶ ಗೌಡಾಜಿ ಅವರು ಬಿ.ಜೆ.ಪಿ ಅಭಿಮಾನಿಗಳನ್ನು ಮೊಬೈಲ್ ಮೂಲಕ ಬಿ.ಜೆ.ಪಿಗೆ ಸದಸ್ಯರನ್ನಾಗಿ ನೇಮಿಸಿಕೊಂಡರು. ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ, ಬಿ.ಜೆ.ಪಿ ಹಿರಿಯ ಮುಖಂಡ ದತ್ತಾತ್ರೇಯ ಜೋಶಿ, ಜಿಲ್ಲಾ ಬಿ.ಜೆ.ಪಿ ಯುವ ಮೋರ್ಚಾ ಕಾರ್ಯದರ್ಶಿ ಕಿರಣ ದಾಟನಾಳ, ಅರುಣ ಆಲೂರ ಮರಿಯಪ್ಪ ವಡ್ಡರ, ಪ್ರಕಾಶ ಹಣವಾಳ, ಪ್ರವೀಣ ಭಂಡಿ ಸೇರಿದಂತೆ ಕಾರ್ಯಕರ್ತರು, ಅಭಿಮಾನಿಗಳು ಇದ್ದರು.

## ಶಿಕ್ಷಕರ ವೃತ್ತಿ ಪವಿತ್ರವಾದದ್ದು



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಶಿಕ್ಷಕರ ವೃತ್ತಿ ಅತ್ಯಂತ ಪವಿತ್ರವಾದ ಹುದ್ದೆಯಾಗಿದೆ ಎಂದು ಸುನಂದಾ ಮಡ್ಡಿಕಾರ ಹೇಳಿದರು. ಅವರು ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.2ರಲ್ಲಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಬೆಂಗಳೂರು ಹಾಗೂ ಗದಗ ಜಿಲ್ಲಾ ಘಟಕದ 2024/25ನೇ ಸಾಲಿನ ಗದಗ ಜಿಲ್ಲಾ ಉತ್ತಮ ಶಿಕ್ಷಕಿ ಪ್ರಶಸ್ತಿ ಸ್ವೀಕರಿಸಿ ಮಾತನಾಡಿ, ಶಿಕ್ಷಕ ವೃತ್ತಿ ಪೂರ್ವ ಜನ್ಮದ ಪುಣ್ಯದ ಫಲವಾಗಿದ್ದು, ಈ ಪ್ರಶಸ್ತಿಯಿಂದ ಮತ್ತಷ್ಟು ಶಕ್ತಿ ಬಂದಿದೆ. ಎಲ್ಲಾ ವೃತ್ತಿಗಿಂತ ಶಿಕ್ಷಕ ವೃತ್ತಿ ಅತ್ಯಂತ ಶ್ರೇಷ್ಠವಾದ ವೃತ್ತಿಯಾಗಿದೆ ಎಂದರು.

ಶಾಲಾ ಪ್ರಧಾನ ಗುರು ಎ.ಸಿ. ಶ್ಯಾಗೋಟಿ, ಎಂ.ಸಿ. ಮುರುಗಿಮಠ, ಜಿ.ಜಿ. ಗುಡಿ, ಎನ್.ಬಿ. ಪರ್ವತಗೌಡ, ಎಸ್.ಬಿ. ಆಲೂರ, ಜೆ.ಎನ್. ಜವಳಿ, ನಿರ್ಮಲಾ ಲಕ್ಷ್ಮೇಶ್ವರ, ಎಂ.ಎಂ. ಮೆಗಲಮನಿ ಮುಂತಾದವರು ಉಪಸ್ಥಿತರಿದ್ದರು.

## ಚೆಸ್‌ನಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಪಟ್ಟಣದ ವಿ.ಜಿ. ಲಿಂಬಿಕಾಯಿ ಪ್ರೌಢಶಾಲೆಯ 10ನೇ ತರಗತಿ ವಿದ್ಯಾರ್ಥಿನಿ ಪೂರ್ಣಿಮಾ ಸಿ.ಗಣಪ್ಪನವರ ಗದಗ ಕೆ.ಎಚ್. ಪಾಟೀಲ ಒಳ ಕ್ರೀಡಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಪ್ರೌಢಶಾಲೆ ವಿಭಾಗದ ಚೆಸ್ ಸ್ಪರ್ಧೆಯಲ್ಲಿ ಪ್ರೌಢಶಾಲೆ ವಿಭಾಗದ ಚೆಸ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ಇದೇ ಶಾಲೆಯ ವಿದ್ಯಾರ್ಥಿನಿ ವೀಣಾ ಚೌಡಾಳ ದ್ವಿತಿಯ ಸ್ಥಾನ ಪಡೆದಿದ್ದು, ವಿದ್ಯಾರ್ಥಿಗಳ ಸಾಧನೆಗೆ ರೋಟರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷೆ ಅಕ್ಕಮಹಾದೇವಿ ಕಡ್ಡಿ, ಗೌ.ಕಾರ್ಯದರ್ಶಿ ಕೊಟ್ರೇಶ ಅಂಗಡಿ, ಸದಸ್ಯರಾದ ಜೆ.ಎಸ್. ಅಳವಂಡಿ, ಎಸ್.ವೈ. ನಾಡಗೌಡ್ರ. ಪ್ರೌಢಶಾಲೆ ಪ್ರಧಾನ ಗುರು ಎಂ.ಬಿ. ನಾಗರಹಳ್ಳಿ, ಪ್ರಾಥಮಿಕ ಶಾಲೆಯ ಪ್ರಧಾನ ಗುರು ಸಿ.ವಿ. ಪಾಟೀಲ, ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.



## ಬೀದಿ ನಾಟಕಗಳಿಂದ ಜಾಗೃತಿ





**■ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜದಲ್ಲಿ ಕಂಡುಬರುವ ಹಲವಾರು ಸಮಸ್ಯೆಗಳಲ್ಲಿ ಆರೋಗ್ಯ ಸಮಸ್ಯೆಗಳು ಸಾಮಾನ್ಯವಾಗಿದ್ದು, ತಿಳುವಳಿಕೆ ಕೊರತೆಯಿಂದ ರೋಗಗಳು ಹರಡುತ್ತಿವೆ. ಇಂತಹ ಸಮಸ್ಯೆಗಳ ಕುರಿತು ಜನರಲ್ಲಿ ತಿಳುವಳಿಕೆ ಮೂಡಿಸುವುದು ಅಗತ್ಯವಾಗಿದೆ ಎಂದು ಡಾ. ವ್ಹಿ.ಎ. ನಿಂಗೋಜಿ ಅಭಿಪ್ರಾಯಪಟ್ಟರು.

ಇತ್ತೀಚೆಗೆ ಪಂ. ಪಂಚಾಕ್ಷರ ಗವಾಯಿಗಳವರ ಕಲಾ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನಾ ಘಟಕದ ಆಶ್ರಯದಲ್ಲಿ ಸ್ವಚ್ಚ್ಛಾತಾ ಹೀ ಸೇವಾ ಸಪ್ತಾಹ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಇಂತಹ ತಿಳುವಳಿಕೆ ಮೂಡಿಸುವಲ್ಲಿ ಪ್ರಭಾವಶಾಲಿ ವಿಧಾನಗಳಲ್ಲಿ ಬೀದಿ ನಾಟಕಗಳು ಒಂದಾಗಿವೆ. ಬೀದಿ ನಾಟಕಗಳ ಪ್ರದರ್ಶನದಿಂದ ಜನರಲ್ಲಿ ಜಾಗೃತಿಯುಂಟಾಗುತ್ತಿರುವುದು ಇತ್ತೀಚಿನ ಸಂಶೋಧನೆಯ ಮೂಲಕ ದೃಢಪಟ್ಟಿದೆ. ಯುವಕರು ತಂಡ ಕಟ್ಟಿಕೊಂಡು ಸಮಾಜದಲ್ಲಿನ ಸಮಸ್ಯೆಗಳನ್ನು, ಮೂಢನಂಬಿಕೆಗಳನ್ನು ಪರಿಹರಿಸುವಲ್ಲಿ ಹೆಚ್ಚು ಹೆಚ್ಚು ಬೀದಿ ನಾಟಕಗಳನ್ನು ಪ್ರದರ್ಶಿಸಿ ತಮ್ಮ ವ್ಯಕ್ತಿತ್ವವನ್ನು ವೃದ್ಧಿಸಿಕೊಳ್ಳಬೇಕೆಂದರು.

ಪ್ರಾರಂಭದಲ್ಲಿ ಪ್ರೊ. ಎಂ.ಎನ್. ಹೊಂಬಾಳಿ ಸರ್ವರನ್ನು ಸ್ವಾಗತಿಸುವದರೊಂದಿಗೆ ಬೀದಿ ನಾಟಕದಲ್ಲಿನ ಪಾತ್ರಧಾರಿಗಳನ್ನು, ಸ್ವಯಂ ಸೇವಕರನ್ನು ಅಭಿನಂದಿಸಿ, ವಂದಿಸಿದರು.




ಸ್ವಾತಂತ್ರ್ಯ ಚಳುವಳಿಯ ಮೂಲಕ ಮಹಾತ್ಮರೆನಿಸಿದ ಗಾಂಧೀಜಿ ಅವರ 155ನೇ ಜಯಂತಿ ಹಿನ್ನೆಲೆಯಲ್ಲಿ ಹಾಗೂ ಅವರು ಬೆಳಗಾವಿಗೆ ಭೇಟಿ ನೀಡಿ 100 ವರುಷ ಪೂರೈಸಿರುವ ಸಂದರ್ಭದಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಕೈಗೊಂಡಿರುವ ಗಾಂಧಿ ನಡಿಗೆ ಪಾದಯಾತ್ರೆಯ ನಂತರದಲ್ಲಿ ಕಾಂಗ್ರೆಸ್ ಯುವ ನಾಯಕ ಕರೀಮಸಾಬ ಸುಣಗಾರ ನೇತೃತ್ವದ ನಿಯೋಗದೊಂದಿಗೆ ನಗರದ ಸಬರಮತಿ ಆಶ್ರಮಕ್ಕೆ ಭೇಟಿ ನೀಡಿ ಪುಷ್ಪನಮನ ಸಲ್ಲಿಸಿದರು.

## ಗ್ರಾಮ ದೇವಿಗೆ ಘಟಸ್ಥಾಪನೆ

**■ವಿಜಯಸಾಕ್ಷಿ ಸುದ್ದಿ, ರೋಣ**

ತಾಲೂಕಿನ ಸಂದಿಗವಾಡ ಗ್ರಾಮದ ಗ್ರಾಮ ದೇವಿಗೆ ನವರಾತ್ರಿ ಉತ್ಸವದ ಅಂಗವಾಗಿ ಬುಧವಾರ ದೇವಿಗೆ ಪರಾಣದ ಘಟಸ್ಥಾಪನೆ ಮಾಡಲಾಯಿತು.



ಅ.3ರಿಂದ 12ರವರಿಗೆ ದೇವಿ ಪುರಾಣ ಕಾರ್ಯಕ್ರಮ ಸಾಯಂಕಾಲ 7ರಿಂದ 8ರವರಿಗೆ ಹಮ್ಮಿಕೊಳ್ಳಲಾಗಿದೆ. ದೇವಿ ಪುರಾಣ ಪ್ರವಚನ ಮರಳು ಸಿದ್ಧಯ್ಯ ಹಿರೇಮಠ, ಪುರಾಣ ಪೂಜೆ ರಾಚಯ್ಯ ಬೆಂಕಿಸ್ವಾಮಿಮಠ, ಗ್ರಾಮ ದೇವತಿಯ ಪೂಜೆಯನ್ನು ದ್ಯಾಮಣ್ಣ ಬಡಿಗೇರ, ತಬಲವಾದಕ ಮಲ್ಲೇಶ ಹೂಗಾರ ಮಾಡುವರು. ಮಾಹದೇವಗೌಡ ಪಾಟೀಲ, ಮಲ್ಲನಗೌಡ ಪಾಟೀಲ, ವೀರುಪಾಕ್ಷಗೌಡ ಪಾಟೀಲ, ಚನ್ನಪ್ಪಗೌಡ ಪಾಟೀಲ ಸೇರಿದಂತೆ ಗ್ರಾಮಸ್ಥರು ಈ ಸಂದರ್ಭದಲ್ಲಿ ಇದ್ದರು.

## ನಿಧನ ವಾರ್ತೆ



**ವಿರೂಪಾಕ್ಷಪ್ಪ ಕುಸ್ಲಾಪೂರ**

ಮುಳಗುಂದ: ಪಟ್ಟಣ ಸಮೀಪದ ಸೊರಟೂರ ಗ್ರಾಮದ ಕಲ್ಮೇಶ್ವರ ಓಣಿಯ ನಿವಾಸಿ ಶಿಕ್ಷಕ ವಿರೂಪಾಕ್ಷಪ್ಪ ಕುಸ್ಲಾಪೂರ (54) ಮಂಗಳವಾರ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗ ಅಗಲಿದ್ದಾರೆ.



## ಗ್ರಾಮ ಪಂಚಾಯತ ಕಾರ್ಯಾಲಯ, ಕುರ್ತಕೋಟಿ

ತಾಲೂಕ:–ಗದಗ ಜಿಲ್ಲಾ :– ಗದಗ

ಸಂ.ಗ್ರಾ.ಪಂ.ಕು/ಮ.ಗ್ರಾಂ.ರಾ.ಗ್ರರ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ: 01/10/2024

**–: ದರಪಟ್ಟಿ ಪ್ರಕಟಣೆ :–**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕುರ್ತಕೋಟಿ ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಬೂದಿಶ್ವರ ಹೊಸಳ್ಳಿ ಗ್ರಾಮದ ದುಂದೂರ ದಾರಿಯಲ್ಲಿರುವ ಪಕ್ಕೀರಸ್ವಾಮಿಮಠದ ಹತ್ತಿರ ಸಿ ಸಿ ರಸ್ತೆ ನಿರ್ಮಾಣ | 322929 | 500 | ಖಾಲಿ ಟೆಂಡರ್ ಫಾರಂಗಳನ್ನು ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸತಕ್ಕದ್ದು. |
| 2 | ಕುರ್ತಕೋಟಿ ಗ್ರಾಮದ ಗಂಡು ಮಕ್ಕಳ ಶಾಲಾ ಶೌಚಾಲಯ ನಿರ್ಮಾಣ | 129613 | 500 | |
| 3 | ಕುರ್ತಕೋಟಿ ಗ್ರಾಮದ ಬೆಂತೂರ ದಾರಿಯಲ್ಲಿ ಗಟಾರ ನಿರ್ಮಾಣ | 303733 | 500 | |
| 4 | ಬೂ ಹೊಸಳ್ಳಿ ಗ್ರಾಮದ ಸ್ಮಶಾನ ಅಭ್ಬಿವೃದ್ಧಿ ಪಡೆಸುವುದು | 324318 | 500 | |
| 5 | ಕುರ್ತಕೋಟಿ ಗ್ರಾಮದ ಮುಳಗುಂದ ರಸ್ತೆಯ ಸೀಮೆದಾರಿಗೆ ಹೊಗಲು ಸಿ ಡಿ ನಿರ್ಮಾಣ | 158212 | 500 | |
| 6 | ಕುರ್ತಕೋಟಿ ಗ್ರಾಮದ ಕರಿಯಮ್ಮನಗುಡಿ ಹತ್ತಿರಯಿರುವ ಹಳ್ಳಕ್ಕೆ ಸಿ ಡಿ ನಿರ್ಮಾಣ | 90006 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ : 03/10/2024 ರಿಂದ 10/10/2024 ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ : 14/10/2024 ಮುಂಜಾನೆ 10.00 ಗಂಟೆಗೆಯಿಂದ ಮಧ್ಯಾಹ್ನ 2.30 ಗಂಟೆಯವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ : 14/10/2024 ಮಧ್ಯಾಹ್ನ 4.00 ಗಂಟೆ.

ನಿಬಂಧನೆಗಳು

1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ (ರಜಾ ದಿನಗಳನ್ನು ಹೊರತುಪಡಿಸಿ) ಗ್ರಾಮ ಪಂಚಾಯತ ಕಛೇರಿಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ/–
**ಪಂಚಾಯತ ಅಭಿವೃದ್ಧಿ ಅಧಿಕಾರಿಗಳು**
ಗ್ರಾಮ ಪಂಚಾಯತ ಕುರ್ತಕೋಟಿ

ಸಹಿ/–
**ಅಧ್ಯಕ್ಷರು**
ಗ್ರಾಮ ಪಂಚಾಯತ ಕುರ್ತಕೋಟಿ

# ಯುವಕರು ದೇಶದ ಇತಿಹಾಸ ಅರಿಯಿರಿ



■ವಿಜಯಸಾಕ್ಷಿ ಸುದ್ದಿ, ನರಗುಂದ

ತಾಲೂಕಿನ ಕೊಣ್ಣೂರ ಗ್ರಾಮದ ಶ್ರೀ ಪರಮೇಶ್ವರ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯಕ್ರಮಗಳ ನಿಮಿತ್ತ ಗದುಗಿನ ಚಿತ್ರ ಕಲಾವಿದ ಶಂಕರಗೌಡ ಪಾಟೀಲರು ಗ್ರಾಮದ ದೇವಸ್ಥಾನದ ಆವರಣದಲ್ಲಿ ರಾಜ್ಯದ ವಿವಿಧ ದೇವಸ್ಥಾಗಳ ಫೋಟೋ ಮತ್ತು ದೇವಸ್ಥಾನಗಳ ಪರಂಪರೆ ತಿಳಿಸುವ ಲೇಖನಗಳ ಪ್ರದರ್ಶನ ಏರ್ಪಡಿಸಿದ್ದರು.

ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರು ಪ್ರದರ್ಶನವನ್ನು ವೀಕ್ಷಿಸಿ ಮಾತನಾಡಿ, ನಾಡಿನ ಸಾಹಿತ್ಯ ಸಮ್ಮೇಳನ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಚಿತ್ರಕಲಾವಿದ ಶಂಕರಗೌಡ ಪಾಟೀಲರು ನಮ್ಮ ಭಾರತ ಸ್ವಾತಂತ್ರ್ಯ ಸಂಗ್ರಾಮ, ಕರ್ನಾಟಕ ಏಕೀಕರಣ ಹಾಗೂ ರಾಜ್ಯದ, ದೇಶದ ಐತಿಹಾಸಿಕ ಪರಂಪರೆಯ ದೇವಸ್ಥಾನಗಳ ಛಾಯಾಚಿತ್ರ ಹಾಗೂ ಲೇಖನಗಳ ಪ್ರದರ್ಶನ ಮಾಡುತ್ತಿರುವುದು ಶ್ಲಾಘನೀಯ. ಯುವಕರು ನಮ್ಮ ದೇಶದ ಇತಿಹಾಸವನ್ನು ತಿಳಿದುಕೊಳ್ಳುವ ಅಗತ್ಯವಿದೆ ಎಂದರು.

ಈ ಸಂದರ್ಭದಲ್ಲಿ ಭೈರನಹಟ್ಟಿ ದೊರೆಸ್ವಾಮಿ ವಿರಕ್ತಮಠದ ಶಾಂತಲಿಂಗ ಶ್ರೀಗಳು, ಕೊಣ್ಣೂರ ಗ್ರಾಮದ ವಿರಕ್ತಮಠ ಶ್ರೀಗಳು, ಕಲ್ಮಠದ ಶ್ರೀಗಳು, ಶಾಸಕ ಸಿ.ಸಿ. ಪಾಟೀಲ, ರಾಜುಗೌಡ ಕೆಂಚನಗೌಡ್ರ, ಗ್ರಾ.ಪಂ ಅಧ್ಯಕ್ಷೆ ಸಿದ್ದವ್ವ ಬಸವರಾಜ ಕಳಕಣ್ಣವರ, ಶೇಖರಗೌಡ ನಿಂಗಪ್ಪ ವಜ್ರಂಗಿ, ಜಕ್ಕಪ್ಪನವರ, ಬಾಬುಗೌಡ್ರ, ಸೋಮಾಪೂರ ಮುಂತಾದವರಿದ್ದರು.

### ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ

# ಹಿರಿಯ ನಾಗರಿಕರ ಕೊಡುಗೆಯನ್ನು ಸ್ಮರಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಅನುಭವದಲ್ಲಿ ಅಮೃತವಿದೆ ಎನ್ನುವ ಗಾದೆಯ ಮಾತಿನಂತೆ ನಮ್ಮ ಜೀವನ ಪರಿಪಕ್ವವಾಗಲು ಅನುಭವ ಬಹಳ ಮುಖ್ಯ ಪಾತ್ರ ವಹಿಸುತ್ತದೆ. ಈ ನಿಟ್ಟಿನಲ್ಲಿ ಇಂದಿನ ಯುವ ಪೀಳಿಗೆಗೆ ಹಿರಿಯರ ಮಾರ್ಗದರ್ಶನ ಅವಶ್ಯವಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲೆಯಲ್ಲಿ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವಾ ನಿರತ ಸ್ವಯಂ ಸೇವಾ ಸಂಸ್ಥೆ ಮತ್ತು ಸಂಘಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಿರಿಯ ನಾಗರಿಕರು ನಮ್ಮ ದೇಶಕ್ಕೆ ನೀಡಿರುವ ಕೊಡುಗೆಯನ್ನು ಸ್ಮರಿಸಬೇಕಾಗಿದೆ. ಹಿರಿಯರನ್ನು ಗೌರವ ಮತ್ತು ಭಕ್ತಿಯಿಂದ ಕಾಣುವುದು ನಮ್ಮ ಸಂಪ್ರದಾಯವಾಗಿದೆ. ಜನ್ಮ ಕೊಟ್ಟ ತಂದೆ-ತಾಯಿಗಳ ಪಾಲನೆ, ಪೋಷಣೆ ಮಾಡುವುದು ಮಕ್ಕಳ ಕರ್ತವ್ಯ. ಹಿರಿಯರು ಅನುಭವದ ಬಂಢಾರವಾಗಿದ್ದಾರೆ. ಹಿರಿಯ ನಾಗರಿಕರಿಗೆ ವಯೋಸಹಜವಾಗಿ ಕೆಲವು ಕೆಲವು ದೈಹಿಕ ತೊಂದರೆಗಳು ಕಾಣಿಸಿಕೊಳ್ಳುತ್ತವೆ. ಅದಕ್ಕೆ ಸೂಕ್ತ ಚಿಕಿತ್ಸೆಯ ಅಗತ್ಯವಿದೆ. ಹಿರಿಯ ನಾಗರಿಕರು ತಮ್ಮ ಶಕ್ತ್ಯಾನುಸಾರವಾಗಿ ಪ್ರತಿನಿತ್ಯ ಯೋಗ ಹಾಗೂ ಸಣ್ಣ ಪುಟ್ಟ ವ್ಯಾಯಾಮ ರೂಢಿಸಿಕೊಳ್ಳಬೇಕು. ಹಿರಿಯ ನಾಗರಿಕರಿಗಾಗಿ ಸರ್ಕಾರದಿಂದ ಅನೇಕ ಯೋಜನೆಗಳು ಜಾರಿಯಾಗಿದ್ದು, ಅವುಗಳ ಸೌಲಭ್ಯ ಪಡೆದುಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ 80ಕ್ಕಿಂತ ಹೆಚ್ಚಿನ ವಯೋಮಿತಿಯ ಹಿರಿಯ ನಾಗರಿಕರನ್ನು ಸನ್ಮಾನಿಸಲಾಯಿತು. ಹಿರಿಯ ನಾಗರಿಕರಿಗಾಗಿ ಏರ್ಪಡಿಸಲಾಗಿದ್ದ ಕ್ರೀಡಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಲಕ್ಷ್ಮೇಶ್ವರದ ಜಿ.ಎಫ್. ಉಪನಾಳ ಟ್ರಸ್ಟ್ ಶಾಂತಿಧಾಮ ವೃದ್ಧಾಶ್ರಮದ ಅಧ್ಯಕ್ಷ ಪ್ರಕಾಶ ಉಪನಾಳ, ನಿವೃತ್ತ ಸರ್ಕಾರಿ ನೌಕರರ ಕೋ-ಆಪ್ ಕ್ರೆಡಿಟ್ ಸೊಸೈಟಿಯ ಅಧ್ಯಕ್ಷ ಬಿ.ಎಂ. ಬಿಳಿಎಲಿ, ಗದಗ ಜಿಲ್ಲಾ ನಿವೃತ್ತ ನೌಕರರ ಹಾಗೂ ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ಬಿ.ಎ. ವಸ್ತ್ರದ, ಪ್ರೊಬಸ್ ಕ್ಲಬ್ಸ್ ಅಧ್ಯಕ್ಷ ವಿ.ಎಂ. ಮುಂದಿನಮನಿ, ಮಾಜಿ ಸೈನಿಕರ ಸಂಘದ ಅಧ್ಯಕ್ಷ ಜಿ.ಎ. ಮಾಲಗಿತ್ತಿಮಠ,

ಗದಗ ಜಿಲ್ಲಾ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಕೆ.ಎಚ್. ಬೇಲೂರ ಮಾತನಾಡಿ, ಹಿರಿಯ ನಾಗರಿಕರನ್ನು ಗೌರವದಿಂದ ಕಾಣಬೇಕು. ಹಿರಿಯ ನಾಗರಿಕರ ಹುಮ್ಮಸ್ಸು ಮುಂದಿನ ಪೀಳಿಗೆಗೆ ಮಾದರಿಯಾಗಬೇಕು. ಪರಿಸ್ಥಿತಿಗೆ ಹೊಂದಿಕೊಂಡು ನಡೆಯಲು ಹಿರಿಯ ನಾಗರಿಕರು ರೂಢಿಸಿಕೊಳ್ಳಬೇಕು. ತಂದೆ ತಾಯಿಗಳ ಸಂರಕ್ಷಣೆ ಮಾಡಬೇಕಾದದ್ದು ಮಕ್ಕಳ ಕರ್ತವ್ಯವಾಗಿದೆ. ಹಿರಿಯ ನಾಗರಿಕರು ಯಾವಾಗಲೂ ವಿಶ್ವಾಸ ಹಾಗೂ ಶ್ರದ್ಧೆ ಕಳೆದುಕೊಳ್ಳಬಾರದು ಎಂದು ತಿಳಿಸಿದರು.

ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ ಪಿಂಚಣಿದಾರರ ಸಂಘದ ಅಧ್ಯಕ್ಷ ಎ.ಎನ್. ಬಸ್ತಿ, ಗದಗ ಜಿಲ್ಲಾ ಸರ್ಕಾರಿ ನಿವೃತ್ತ ನೌಕರರ ಸಂಘದ ಕಾರ್ಯದರ್ಶಿ ಎಮ್.ಸಿ. ವಗ್ಗಿ, ಬಿ.ಎಸ್. ತೋಟಗೇರ, ಸಾಹಿತಿಗಳಾದ ಐ.ಕೆ. ಕಮ್ಮಾರ, ಅಂದಾನೆಪ್ಪ ವಿಭೂತಿ ಸೇರಿದಂತೆ ಜಿಲ್ಲೆಯಲ್ಲಿ ಹಿರಿಯ ನಾಗರಿಕ ಕ್ಷೇತ್ರದಲ್ಲಿ ಸೇವಾ ನಿರತ ಸ್ವಯಂ ಸೇವಾ ಸಂಸ್ಥೆ ಮತ್ತು ಸಂಘಗಳು, ಹಿರಿಯ ನಾಗರಿಕರು ಉಪಸ್ಥಿತರಿದ್ದರು.

ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಕೆ. ಮಹಾಂತೇಶ ಸರ್ವರನ್ನು ಸ್ವಾಗತಿಸಿದರು. ಮಲ್ಲಪ್ಪ ಹೊಸಳ್ಳಿ ಕಾರ್ಯಕ್ರಮ ನಿರೂಪಿಸಿದರು. ಪ್ರಕಾಶ ಗಾಣಿಗೇರ ವಂದಿಸಿದರು.

# ಶ್ರೀ ದೇವಿ ಪುರಾಣ ಇಂದಿನಿಂದ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ರೆಲ್ವೆ ಪೊಲೀಸ್ ಕ್ವಾರ್ಟಸ್ ಬಳಿಯ ಶ್ರೀ ಬನ್ನಿ ಮಹಾಕಾಳಿ ಸೇವಾ ಸಮಿತಿ ವತಿಯಿಂದ ಶರನ್ನವರಾತ್ರಿ ಉತ್ಸವದ ಪ್ರಯುಕ್ತ ಘಟಸ್ಥಾಪನೆ ಹಾಗೂ ಶ್ರೀ ದೇವಿಪುರಾಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅ. 3ರಿಂದ 11ರವರೆಗೆ ಪ್ರತಿದಿನ ಸಂಜೆ 6.30ರಿಂದ 9ರವರೆಗೆ ದೇವಸ್ಥಾನದ ಆವರಣದಲ್ಲಿ ವೀರೇಶ್ವರ ಪುಣ್ಯಾಶ್ರಮದ ವೇ.ಮೂ. ಹೇಮರಾಜ ಶಾಸ್ತ್ರಿ ಹಿರೇಮಠ (ಹೆಡಿಗ್ಗೊಂಡ) ಇವರಿಂದ ಪುರಾಣ ಕಾರ್ಯಕ್ರಮ ಜರುಗಲಿದ್ದು, ಅ. 3ರ ಸಂಜೆ 5.30ಕ್ಕೆ ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಕಲ್ಲಯ್ಯಜ್ಜನವರು ಹಾಗೂ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮಿಗಳ ಸಾನ್ನಿಧ್ಯದಲ್ಲಿ ಪುರಾಣ ಕಾರ್ಯಕ್ರಮಕ್ಕೆ ಚಾಲನೆ ದೊರೆಯಲಿದೆ.

ಅ. 12ರಂದು ವಿಜಯದಶಮಿ ನಿಮಿತ್ತ ಬೆಳಿಗ್ಗೆ 11 ಗಂಟೆಗೆ ಶ್ರೀ ದೇವಿಯ ಪಾಲಕಿ ಉತ್ಸವ, ಅನ್ನಸಂತರ್ಪಣೆ ಜರುಗಲಿದೆ. ಸಂಜೆ 6.30ಕ್ಕೆ ಶ್ರೀ ಬನ್ನಿ ಮಹಾಕಾಳಿ ದೇವಸ್ಥಾನದಲ್ಲಿ ಬನ್ನಿ ಮುಡಿಯುವ ಕಾರ್ಯಕ್ರಮ, ಪ್ರತಿದಿನ ಪುರಾಣ ಪ್ರವಚನದ ನಂತರ ಪ್ರಸಾದ ಸೇವೆ ಆಯೋಜಿಸಲಾಗಿದೆ. ಈ ಪವಿತ್ರ ಕಾರ್ಯದಲ್ಲಿ ಸರ್ವರೂ ಪಾಲ್ಗೊಳ್ಳುವಂತೆ ಸೇವಾ ಸಮಿತಿಯ ಪ್ರಕಟಣೆ ಕೋರಿದೆ.

### ಅಬ್ಬಿಗೇರಿಯಲ್ಲಿ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನ

# ರಂಭಾಪುರಿ ಶ್ರೀಗಳಿಗೆ ಗೌರವ ಸಮರ್ಪಣೆ



■ವಿಜಯಸಾಕ್ಷಿ ಸುದ್ದಿ, ಗದಗ

ರೋಣ ತಾಲೂಕಿನ ಅಬ್ಬಿಗೇರಿ ಗ್ರಾಮದಲ್ಲಿ ಅ. 3ರಿಂದ 12ರವರೆಗೆ ನಡೆಯಲಿರುವ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನಕ್ಕೆ ಗದಗ ಮಾರ್ಗವಾಗಿ ಪ್ರಯಾಣಿಸಿದ ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ವೀರಸಿಂಹಾಸನಾಧೀಶ್ವರ ಜ.ಪ್ರಸನ್ನ ರೇಣುಕ ಡಾ.ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರನ್ನು ಗದುಗಿನ ಭಕ್ತಾಧಿಗಳು ಗೌರವ ಸಮರ್ಪಣೆಗೈದು ಭಕ್ತಿಯಿಂದ ಬೀಳ್ಕೊಟ್ಟರು.

ಬುಧವಾರ ನಗರದ ಜಗದ್ಗುರು ಪಂಚಾಚಾರ್ಯ ಮಾಂಗಲ್ಯ ಮಂದಿರದ ಆವರಣದಲ್ಲಿ ಏರ್ಪಡಿಸಿದ್ದ ಸರಳ ಔಪಚಾರಿಕ ಕಾರ್ಯಕ್ರಮದಲ್ಲಿ ಮಾತನಾಡಿದ ಪೂಜ್ಯರು ಸರ್ವ ಭಕ್ತಾಧಿಗಳಿಗೆ ಆಶೀರ್ವದಿಸಿ, ಅಬ್ಬಿಗೇರಿಯಲ್ಲಿ ಜರುಗಲಿರುವ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಲ್ಲಿ ಸರ್ವ ಭಕ್ತಾಧಿಗಳು ಪಾಲ್ಗೊಳ್ಳುವಂತೆ ಕರೆ ನೀಡಿದರು.

ಜಗದ್ಗುರು ಪಂಚಾಚಾರ್ಯ ಮಾಂಗಲ್ಯ ಮಂದಿರದ ಕಾರ್ಯದರ್ಶಿ ಚಂದ್ರು ಬಾಳಿಹಳ್ಳಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಾಂಗಲ್ಯ ಮಂದಿರದ ಕಾರ್ಯಾಧ್ಯಕ್ಷ ಅಜ್ಜಣ್ಣ ಮಲ್ಲಾಡದ, ವೀರೇಶ ಕೂಗು, ರಮೇಶ ಶಿಗ್ಲಿ, ಮಲ್ಲಿಕಾರ್ಜುನ ಶಿಗ್ಲಿ, ಶಿವಾನಂದಯ್ಯ ಹಿರೇಮಠ, ರಾಜಣ್ಣ ಕುರಡಗಿ, ಸದಾಶಿವಯ್ಯ ಮದರಿಮಠ, ಲಿಂಗರಾಜ ಗುಡಿಮನಿ, ವಿನಾಯಕ ಪಾಟೀಲ, ಬಸವರಾಜ ಅಂಗಡಿ, ಶರಣಯ್ಯ ಜುಕ್ತಿಮಠ, ಸಿ.ಬಿ. ಪಲ್ಲೇದ, ಬಸಯ್ಯ ಸಾಸ್ವಿಹಳ್ಳಿಮಠ, ಬಸಯ್ಯ ಇಟಗಿಮಠ, ಸಂತೋಷ ನಾಯ್ಕರ್, ಶಾದಿಕ್ ಶೇಖ, ಮಾಬಳೇಶ್ವರ ಇಟಗಿಮಠ, ರಮೇಶ ಚವ್ಹಾಣ, ನಿಂಗನಗೌಡ್ರ ತಿಪ್ಪನಗೌಡ್ರ, ರಾಮಪ್ಪ ಅಣ್ಣಿಗೇರಿ, ಶ್ರೀಕಾಂತ ಹೂಗಾರ, ರೇವಪ್ಪ ಪೋಡಕೆ, ಮಹಾಂತಯ್ಯ ಇಟಗಿಮಠ, ಅಬ್ದುಲ್‌ಸಾಬ ದೊಡ್ಡಮನಿ, ಪ್ರಕಾಶ ಬೇಲಿ, ರಾಜಣ್ಣ ಮಲ್ಲಾಡ, ಶಿವಲಿಂಗ ಶಾಸ್ತ್ರಿ ಸಿದ್ದಾಪೂರ ಮುಂತಾದವರಿದ್ದರು.

### 'ಗಾಂಧಿ ನಡಿಗೆ' ಕಾರ್ಯಕ್ರಮದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ

# ಗಾಂಧೀಜಿ ನೆನಪು ಚಿರಸ್ಥಾಯಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ 155ನೇ ಜಯಂತಿ ಹಾಗೂ ಅವರು ಬೆಳಗಾವಿ ಸ್ವಾತಂತ್ರ್ಯ ಸಂಗ್ರಾಮದ ನೇತೃತ್ವವಹಿಸಿ 100 ವರ್ಷಗಳು ಪೂರ್ಣಗೊಂಡ ಹಿನ್ನೆಲೆಯಲ್ಲಿ ಬುಧವಾರ ಶಿಗ್ಲಿ ಗ್ರಾಮದ ಬಳಿಗಾರ ಕಾಲೇಜಿನಿಂದ ಬಜಾರ ಮಾರ್ಗವಾಗಿ ಸೇವಾಮಂದಿರದವರೆಗೆ ಹಮ್ಮಿಕೊಂಡಿದ್ದ 'ಗಾಂಧಿ ನಡಿಗೆ' ಪಾದಯಾತ್ರೆಯಲ್ಲಿ ನೂರಾರು ಕಾರ್ಯಕರ್ತರು ಪಾಲ್ಗೊಂಡು ಯಶಸ್ವಿಗೊಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಉಸ್ತುವಾರಿ ಮೋಹನ ಅಸುಂಡಿ ಅವರು, ಗಾಂಧೀಜಿಯವರು ಬದುಕಿನ ಆದರ್ಶ. ಗಾಂಧೀಜಿ ತನ್ನ ಸತ್ಯ, ಅಹಿಂಸೆಯ ಸಿದ್ಧಾಂತದಿಂದಲೇ ಜಗವನ್ನು ಗೆದ್ದ ಚೇತನರಾಗಿದ್ದರು. ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಬೆಳೆಸಿಕೊಳ್ಳಬೇಕು. ಗಾಂಧೀಜಿಯವರು ಸ್ವಾತಂತ್ರ್ಯ ಸಂಗ್ರಾಮದ ನೇತೃತ್ವ ವಹಿಸಿ ಇದೀಗ ನೂರು ವರ್ಷಗಳು ಪೂರೈಸಿದ್ದು, ಇದನ್ನು ಪ್ರತಿಯೊಬ್ಬರೂ ಸ್ಮರಿಸಬೇಕು. ಗಾಂಧೀಜಿಯವರ ನೆನಪಿನ ಹೆಜ್ಜೆಗಳು ಸದಾ ಚಿರಸ್ಥಾಯಿಯಾಗಿ ಉಳಿದಿವೆ ಎಂದು ಹೇಳಿದರು.

ವಕೀಲ ಎಸ್.ಪಿ. ಬಳಿಗಾರ, ಯುವ ಮುಖಂಡ ಸೋಮಣ್ಣ ಬೆಟಗೇರಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಆರ್. ಕೊಪ್ಪದ ಮಾತನಾಡಿ, ಶಿಗ್ಲಿ ಗ್ರಾಮದಲ್ಲಿ ಸ್ವಾತಂತ್ರ್ಯ ಹೋರಾಟ ಚಳುವಳಿಯಲ್ಲಿ ಯಾವ ತರಹ ಹೋರಾಟ ಮಾಡಬೇಕು ಎಂದು ಹೋರಾಟಗಾರರಿಗೆ ಸ್ವತಃ ಗಾಂಧೀಜಿಯವರೇ ಪತ್ರ ಬರೆದಿದ್ದರು ಎಂಬುದು ಇತಿಹಾಸ ಎಂದರು.

ಈ ಸಂದರ್ಭದಲ್ಲಿ ಪುರಸಭೆ ಉಪಾಧ್ಯಕ್ಷ ಫೀರದೋಷ್ ಆಡೂರ, ಮುಖಂಡರಾದ ಗುರುನಾಥ ದಾನಪ್ಪನವರ, ರಾಮಣ್ಣ ಲಮಾಣಿ(ಶಿಗ್ಲಿ), ದೀಪಕ್ ಲಮಾಣಿ, ರಾಜಣ್ಣ ಕುಂಬಿ, ರಾಜಣ್ಣ ಮಡಿವಾಳರ, ಬಾಲೇಹೊಸರಿನ ಬಸುವರೆಡ್ಡಿ, ಯಲ್ಲಪ್ಪ ತಳವಾರ, ಬಾಬಣ್ಣ ಅಳವಂಡಿ, ರಾಜು ಓಲೇಕಾರ, ರಫೀಕ್ ಕಲಬುರ್ಗಿ, ವಿಜಯ. ಕರಡಿ, ರಾಮಣ್ಣ ರಿತ್ತಿ, ರಮೇಶ ಗಡದವರ ಸಾಹೇಬಜಾನ ಹವಾಲ್ದಾರ ಮಹಾಂತೇಶ ಗುಡಸಲಮನಿ, ಸದಾನಂದ ನಂದೆಣ್ಣವರ, ಯಲ್ಲಪ್ಪ ಸೂರಣಗಿ, ಸಿದ್ದು ದುರಗಣ್ಣವರ ಸೇರಿದಂತೆ ನೂರಾರು ಕಾರ್ಯಕರ್ತರಿದ್ದರು.

ಕಾಂಗ್ರೆಸ್ ಪಕ್ಷದ ನಾಯಕರು ಜೂಮ್ ಮೀಟಿಂಗ್‌ನಲ್ಲಿ ಭಾಗಿಯಾಗಿದ್ದರು. ಈ ಸಂದರ್ಭದಲ್ಲಿ ಕೆಪಿಸಿಸಿ ಉಸ್ತುವಾರಿ ಮೋಹನ ಅಸುಂಡಿ, ಗುರುನಾಥ ದಾನಪ್ಪನವರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಆರ್. ಕೊಪ್ಪದ, ಲಕ್ಷ್ಮೇಶ್ವರ ನಗರ ಘಟಕ ಅಧ್ಯಕ್ಷ ಅಮರೀಶ ತೆಂಬದಮನಿ, ಪುರಸಭೆ ಉಪಾಧ್ಯಕ್ಷ ಫೀರದೋಷ್ ಆಡೂರ, ರಾಮಣ್ಣ ಲಮಾಣಿ (ಶಿಗ್ಲಿ )ಬಾಬಣ್ಣ ಅಳವಂಡಿ ಮುಂತಾದವರಿದ್ದರು.

# ಉದ್ಯಮ ಉತ್ತೇಜಿಸಲು ಮಾರಾಟ ಮಳಿಗೆ ಸಹಕಾರಿ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಸಂಜೀವಿನಿ ಸ್ವ-ಸಹಾಯ ಗುಂಪಿನ ಮಹಿಳೆಯರು ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಸಂಪರ್ಕ ಮತ್ತು ಉದ್ಯಮವನ್ನು ಉತ್ತೇಜಿಸಲು ಸಹಕಾರ ಅಗತ್ಯ ಎಂದು ತಾ.ಪಂ ಇಒ ಬಸವರಾಜ ಬಡಿಗೇರ ಹೇಳಿದರು.

ಪಟ್ಟಣದ ಸಾನ್ವಿ ಮಾರ್ಟ್‌ನಲ್ಲಿ ಸಂಜೀವಿನಿ ಸ್ವ-ಸಹಾಯ ಸಂಘಗಳ ಸದಸ್ಯರು ತಯಾರಿಸಿರುವ ಉತ್ಪನ್ನಗಳ ಮಾರಾಟ ಮಳಿಗೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎನ್‌ಆರ್‌ಎಲ್‌ಎಂ ಸಂಜೀವಿನಿ ಒಕ್ಕೂಟ ಬಡ ಮಹಿಳೆಯ ಸ್ವಯಂ ಉದ್ಯೋಗ ನೀಡುವ ಮೂಲಕ ಅವರನ್ನು ಆರ್ಥಿಕವಾಗಿ, ಸಾಮಾಜಿಕವಾಗಿ ಮುಂದೆ ಬರಲು ದಾರಿ ಮಾಡಿಕೊಟ್ಟಿದೆ. ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಸಂಜೀವಿನಿ ಮಹಿಳಾ ಉದ್ದಿಮೆದಾರರಿಂದ ಮಾರ್ಟ್‌ನಲ್ಲಿ ಅಗರಬತ್ತಿ, ಎಣಿಕೆ ಸಾಮಾಗ್ರಿಗಳು, ಪೇಪರ್ ಪ್ಲೇಟ್, ರೊಟ್ಟಿ, ಗಾಣದ ಎಣ್ಣೆ, ಶೇಂಗಾ, ಕುಸುಬಿ ಚಟ್ನಿ, ಮೂರ್ತಿಗಳು (ಗಿಫ್ಟ್) ಸೇರಿದಂತೆ ಇತರೆ ವಸ್ತುಗಳನ್ನು ಮಾರಾಟ ಮಾಡಲಾಗುತ್ತದೆ.

ಈ ವೇಳೆ ಎನ್‌ಆರ್‌ಎಲ್ ಸಂಜೀವಿನಿ ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕ ಗುರು ವೀರಾಪೂರು, ಮೇಲ್ವಿಚಾರಕ ವೀರೇಶ ಎಸ್.ಬಳಿಗಾರ, ತಾಲೂಕು ವ್ಯವಸ್ಥಾಪಕ ಅನಿಲಕುಮಾರ್, ಸಾನ್ವಿ ಮಾರ್ಟ್ ಅಂಗಡಿಯ ಹಾಗೂ ಸಂಜೀವಿನಿ ಒಕ್ಕೂಟದ ಸಿಬ್ಬಂದಿಗಳಾದ ಕವಿತಾ ರೋಣದ, ಸಮೀನಾ, ರೋಷನ್ ಬೇಗಂ, ಶಾಂತಾ ಕರಮುಡಿ, ಮಾಲಾ ಕಮ್ಮಾರ, ವಿದ್ಯಾ ರೊಳ್ಳಿ, ಸಂಘದ ಉದ್ಯಮಿ ಮಹಿಳೆಯರು ಹಾಗೂ ಸ್ವಸಹಾಯ ಸಂಘದ ಮಹಿಳೆಯರು ಇದ್ದರು.


**PUBLIC CAUTION NOTICE**

Under the instruction and authority given by our client by name Haseena Begum D/o Rajesab Sidnekoppa of Gadag., do hereby issue this public caution notice as follows.

**To,**

**Smt. Mehaboobi W/o Rajesab Sidnekoppa**
**R/o. Gadag and Financial Institutions, Banks and General Public and Whomsoever Concern.**

**An Agriculture Land bearing Sy. No. 587/3 Measuring 08 Acres 16 Guntas, Assessment Rs. 23.02 paisa located at Gadag, Tq: Dist: Gadag, is the subject matter of this caution notice.**

Our client and her sister by name Smt. Reshma W/o Rajesab Hebbali have acquired the above said land under registered partition deed on dated 19/04/2015 jointly. Our client and her sisters have became joint owners and possession of the above said land. This being the facts your name Mehaboobi Rajesab Sidnekoppa is appearing the record of right of the said land without any legal right. Now it is leant that, you collusion with our clients sister are trying to alienate or create charge over the above said entire land behind the back of our client and our client has got half share in the above said land.

Therefore our client has issued this caution notice to you and Financial Institutions, Banks and whomsoever concerned and do hereby call upon you do not make any contract of sale, mortgage, lease etc., with Mehaboobi W/o Rajesab Sidnekoppa in any manner. Failure to this our client will take suitable action against you and such persons in court of law and liable for all cost and consequences.

**This public caution notice**

**Place : Gadag**
**Date : 02/10/2024**

**M.A.PHANIBAND** B.Com.,LL.B(Spl)
ADVOCATE, KAR-775/1985
1st Floor, Law Chamber No.45,
Court Complex, GADAG
MOB : 9880327560



**ಗ್ರಾಮ ಪಂಚಾಯತ ಕಾರ್ಯಾಲಯ, ಬೆಳಧಡಿ**

ತಾಲೂಕ :-ಗದಗ ಜಿಲ್ಲಾ:-ಗದಗ

ಸಂ.ಗ್ರಾ.ಪಂ.ಬೆ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ: 01/10/2024

**-: ದರಪಟ್ಟಿ ಪ್ರಕಟಣೆ :-**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಬೆಳಧಡಿ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂಖ್ಯೆ | ಕಾಮಗಾರಿ ಹೆಸರು | ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಬ್ರಹ್ಮಾನಂದಪೂರ ಗ್ರಾಮದ ಶ್ರೀ ಸೇವಾಲಾಲ ಸಮುದಾಯ ಭವನದ ಆವರಣದ ಹತ್ತಿರ ಅಭಿವೃದ್ಧಿ ಡಿ ಪಿ ಇ ಪಿ ಶಾಲೆ ಅಭಿವೃದ್ಧಿಪಡಿಸ | 490000 | 500 | ಖಾಲಿ ಟೆಂಡರ್ ಫಾರಂಗಳನ್ನು ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 2 | ಬ್ರಹ್ಮಾನಂದಪೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಆಟದ ಮೈದಾನ ಅಭಿವೃದ್ಧಿಪಡಿಸುವುದು. | 400000 | 500 | |
| 3 | ಬ್ರಹ್ಮಾನಂದಪೂರ ಗ್ರಾಮದ ಡಿಪಿಇಪಿ ಶಾಲೆ ಕಂಪೌಂಡ ನಿರ್ಮಾಣ ಮಾಡುವುದು | 490000 | 500 | |
| 4 | ನಭಾಪೂರ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಕಂಪೌಂಡ ನಿರ್ಮಾಣ | 300000 | 500 | |
| 5 | ಕಬಲಾಯತಕಟ್ಟಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಕಂಪೌಂಡ ನಿರ್ಮಾಣ | 400000 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ;-03/10/2024 ರಿಂದ 14/10/2024 ರವರೆಗೆ,
ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;-15-10-2024 ಮುಂಜಾನೆ 10.00ಗಂಟೆಯಿಂದ ಮಧ್ಯಾಹ್ನ 2.30ಗಂಟೆವರೆಗೆ.
ತೆರೆಯುವ ದಿನಾಂಕ ಹಾಗೂ ಸಮಯ:- 15-10-2024 ರ ಮಧ್ಯಾಹ್ನ 4.30ಗಂಟೆ.

ನಿಬಂಧನೆಗಳು

1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ (ರಜಾ ದಿನಗಳನ್ನು ಹೊರತುಪಡಿಸಿ) ಗ್ರಾಮ ಪಂಚಾಯತ ಕಛೇರಿಯಿಂದ ಮಾಹಿತಿ ಪಡೆಯಬಹುದಾಗಿದೆ.

**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತಿ ಬೆಳಧಡಿ**

**ಅಧ್ಯಕ್ಷರು**
**ಗ್ರಾಮ ಪಂಚಾಯತಿ ಬೆಳಧಡಿ**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka